₹ 6 @vishwavaninews epaper.vishwavani.news vishwavani.news ಬೆಂಗಳೂರು | ಹುಬ್ಬಳ್ಳಿ | ಮಂಗಳೂರು | ದಾವಣಗೆರೆ | ಕಲಬುರಗಿ | ಬೆಳಗಾವಿ ಬುಧವಾರ 14.01.2026 ಸಂಪುಟ: 10 ಸಂಚಿಕೆ: 364 ಪುಟಗಳು: 14 ಪ್ರಧಾನ ಸಂಪಾದಕ: ವಿಶ್ವೇಶ್ವರ ಭಟ್

ವಿಶ್ವವಾಣಿ
ವಿಶ್ವಾಸವೇ ವಿಶ್ವ

ಮಕರ ಸಂಕ್ರಾಂತಿಯ ಶುಭಾಶಯಗಳು

ಮಕರ ಸಂಕ್ರಾಂತಿ ಈ ಬಾರಿ ಜನವರಿ 14ರ ಮಧ್ಯಾಹ್ನ ಆರಂಭವಾಗಿ 15ರವರೆಗೂ ವಿಸ್ತರಣೆಯಾಗಿದೆ. ಸುಗ್ಗಿ ಹಬ್ಬದ ಹಿಗ್ಗು ನಿಮ್ಮೆಲ್ಲರ ಮನೆಮನಗಳಲ್ಲಿ ಬೆಳಗಲಿ. ಸಮಸ್ತ ಓದುಗರಿಗೆ, ಏಜೆಂಟರಿಗೆ, ಜಾಹೀರಾತುದಾರರಿಗೆ ಮಕರ ಸಂಕ್ರಾಂತಿಯ ಹಾರ್ದಿಕ ಶುಭಾಶಯಗಳು.

19ಕ್ಕೆ ಡಿಕೆಶಿ, 21ಕ್ಕೆ ಸಿದ್ದರಾಮಯ್ಯ ದೆಹಲಿಗೆ ಪಯಣ
ಸಂಪುಟ ರಚನೆ ಬಳಿಕವೇ ಬಜೆಟ್ ಮಂಡನೆಗೆ ಸಿಎಂ ಪಣ
ಮತ್ತೆ ದಿಲ್ಲಿಯತ್ತ ನೋಟ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ನಾಯಕತ್ವ ಗೊಂದಲ, ಸಚಿವ ಸಂಪುಟ ಪುನಾರಚನೆಯ ಗೊಂದಲದ ನಡುವೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮುಂದಿನ ವಾರ ದೆಹಲಿಗೆ ತೆರಳುತ್ತಿರುವುದು ರಾಜಕೀಯ ವಲಯದಲ್ಲಿ ತೀವ್ರ ಕುತೂಹಲಕ್ಕೆ ಕಾರಣವಾಗಿದೆ.

ಡಿ.ಕೆ.ಶಿವಕುಮಾರ್ ಹಾಗೂ ಸಿದ್ದರಾಮಯ್ಯ ಇಬ್ಬರೂ ಬೇರೆ ಬೇರೆ ಕೆಲಸದ ನಿಮಿತ್ತ ದೆಹಲಿಗೆ ತೆರಳುತ್ತಿದ್ದರೂ ಇಬ್ಬರೂ ಹೈಕಮಾಂಡ್ ನಾಯಕ ರನ್ನು ಪ್ರತ್ಯೇಕವಾಗಿ ಭೇಟಿಯಾಗಿ ಚರ್ಚಿಸುವ ಇರಾದೆಯಲ್ಲಿದ್ದಾರೆ. ಸಿದ್ದರಾಮಯ್ಯ ಅವರು ಬಜೆಟ್‌ಗೂ ಮೊದಲೇ ಸಚಿವ ಸಂಪುಟವನ್ನು ಪುನಾರಚನೆ ಮಾಡಿ ಕೊಳ್ಳುವ ಲೆಕ್ಕಾಚಾರದಲ್ಲಿದ್ದರೆ, ಡಿ.ಕೆ. ಶಿವಕು ಮಾರ್ 'ಸೂತ್ರ'ವನ್ನು ಪ್ರಕಟಿಸುವಂತೆ ಹೈಕಮಾಂಡ್ ಮೇಲೆ ಒತ್ತಡ ಹೇರಲು ತಮ್ಮ ಪ್ರಯತ್ನ ಮುಂದುವರಿಸಲು ದೆಹಲಿಗೆ ತೆರಳಲಿದ್ದಾರೆ.

ಮೂಲಗಳ ಪ್ರಕಾರ, ಅಸ್ಸಾಂ ವಿಧಾನಸಭಾ ಚುನಾವಣೆ ಸಭೆಯಲ್ಲಿ ಭಾಗವಹಿಸಲು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಜ.19ಕ್ಕೆ ತೆರಳುತ್ತಿದ್ದಾರೆ. ಸಿದ್ದರಾಮಯ್ಯ ಅವರು 20, 21ರಂದು ನಡೆಯಲಿರುವ ನರೇಗಾ ಬಚಾವ್ ಸಭೆಯಲ್ಲಿ ಭಾಗವಹಿಸಲು ತೆರಳುತ್ತಿದ್ದಾರೆ. ಈ ಸಭೆಯಲ್ಲಿ ಡಿ.ಕೆ.ಶಿವಕುಮಾರ್ ಸಹ ಭಾಗವಹಿ ಸಲಿದ್ದಾರೆ. ಆದ್ದರಿಂದ ಜ.20, 21ರಂದು ನರೇಗಾ ಹೋರಾಟಕ್ಕೆ ಸಂಬಂಧಿಸಿದಂತೆ ಸಭೆ ಪೂರ್ಣಗೊಂಡ ಬಳಿಕ ರಾಜ್ಯ ರಾಜಕೀಯಕ್ಕೆ ಸಂಬಂಧಿಸಿದಂತೆ ರಾಜ್ಯ ನಾಯಕರೊಂದಿಗೆ ಹೈಕಮಾಂಡ್ ಚರ್ಚೆ ನಡೆಸುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ.

ಸಂಪುಟ ಪುನಾರಚನೆಗೆ ಬೇಡಿಕೆ: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ದೆಹಲಿ ಪ್ರವಾಸದ ವೇಳೆ ಸಂಪುಟ ಪುನಾರಚನೆಗೆ ಸಂಬಂಧಿಸಿದಂತೆ ಚರ್ಚಿಸುವ ಸಾಧ್ಯತೆಯಿದೆ. ರಾಜ್ಯದಲ್ಲಿ ಸರಕಾರ ಅಧಿಕಾರಕ್ಕೆ ಬಂದು ಮೂರು ವರ್ಷ ಕಳೆದಿದೆ. ಸಂಪುಟ ಪುನಾರಚನೆಗೆ ಇದು ಸೂಕ್ತ ಸಮಯ. ಆದ್ದರಿಂದ ಪಕ್ಷದ ಹೈಕಮಾಂಡ್ ಈ ವಿಷಯದಲ್ಲಿ ಶೀಘ್ರ ತೀರ್ಮಾನ ಕೈಗೊಳ್ಳಬೇಕು ಎನ್ನುವ ಬೇಡಿಕೆ ಇಡುವ ಸಾಧ್ಯತೆಯಿದೆ.

ಇದರೊಂದಿಗೆ ಮಾರ್ಚ್‌ನಲ್ಲಿ ಮಂಡಿಸುವ ಬಜೆಟ್‌ಗೂ ಮೊದಲೇ ಸಂಪುಟ ಪುನಾರಚನೆ ಮಾಡುವುದು ಸೂಕ್ತ ಎಂದು ಹೈಕಮಾಂಡ್‌ಗೆ ಮನವಿ ಮಾಡಲಿದ್ದಾರೆ ಎನ್ನಲಾಗಿದೆ. ಹೈಕಮಾಂಡ್‌ನಿಂದ ಸ್ಪಷ್ಟನೆ ಪಡೆದ ಬಳಿಕವೇ ಬಜೆಟ್ ಸಭೆಯನ್ನು ಅಧಿಕೃತವಾಗಿ ಆರಂಭಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ತೀರ್ಮಾನಿಸಿದ್ದಾರೆ. ಈ ಕಾರಣಕ್ಕಾಗಿಯೇ ಗಣರಾಜ್ಯೋತ್ಸವದ ಬಳಿಕ ಅಧಿಕೃತವಾಗಿ ಬಜೆಟ್ ಸಭೆ ನಡೆಸಲು ತೀರ್ಮಾನಿಸಿದ್ದಾರೆ ಎಂದು ಹೇಳಲಾಗುತ್ತಿದೆ.



ಮೈಸೂರಿನ ವಿಮಾನ ನಿಲ್ದಾಣಕ್ಕೆ ಬಂದಿಳಿದ ರಾಹುಲ್ ಗಾಂಧಿ ಅವರನ್ನು ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಸ್ವಾಗತಿಸಿದರು.

ವಿಲ್ ಕಾಲ್ ಯೂ ಸೂನ್!

ನಾಯಕತ್ವ ಗೊಂದಲಕ್ಕೆ ಸಂಬಂಧಿಸಿದಂತೆ ಚರ್ಚಿಸಲು ದೆಹಲಿಗೆ ತೆರಳಲು ಸಜ್ಜಾಗಿದ್ದ ಡಿ.ಕೆ.ಶಿವಕುಮಾರ್ ಅವರಿಗೆ ದೆಹಲಿಗೆ ಕರೆಸಿಕೊಳ್ಳುವ ಭರವಸೆಯನ್ನು ರಾಹುಲ್ ಗಾಂಧಿ ನೀಡಿದ್ದಾರೆ. ತಮಿಳುನಾಡಿನ ಕಾರ್ಯಕ್ರಮ ಮುಗಿಸಿಕೊಂಡು ಮೈಸೂರಿಗೆ ಆಗಮಿಸಿದ ರಾಹುಲ್ ಗಾಂಧಿ ಅವರನ್ನು ದೆಹಲಿಗೆ ಬೀಳ್ಕೊಡುವ ಮೊದಲು ಸಿಎಂ, ಡಿಸಿಎಂ ಪ್ರತ್ಯೇಕವಾಗಿ ಭೇಟಿಯಾಗಿ ಚರ್ಚಿಸಿದ್ದಾರೆ. ಈ ವೇಳೆ ಡಿ.ಕೆ.ಶಿವಕುಮಾರ್ ಅವರಿಗೆ ರಾಹುಲ್ ಗಾಂಧಿ ಅವರು 'ವಿಲ್ ಕಾಲ್ ಯೂ ಸೂನ್' ಎನ್ನುವ ಸಂದೇಶ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ. ದೆಹಲಿಯಲ್ಲಿ ಸಮಯ ನೀಡುವುದಾಗಿ ರಾಹುಲ್ ಹೇಳಿದ್ದರೂ. ಯಾವಾಗ ಎನ್ನುವ ಸ್ಪಷ್ಟನೆ ಇಲ್ಲ. ನರೇಗಾ ಸಭೆಗೆ ತೆರಳಿದಾಗಲೇ ಪ್ರತ್ಯೇಕ ಸಭೆ ನಡೆಸಬಹುದು ಅಥವಾ ಅದಾದ ಬಳಿಕ ಇಬ್ಬರನ್ನು ಕರೆಸಿಕೊಳ್ಳಬಹುದು ಎನ್ನಲಾಗಿದೆ.

- ಜ.19ಕ್ಕೆ ಅಸ್ಸಾಂ ವಿಧಾನಸಭಾ ಚುನಾವಣಾ ಸಭೆಯಲ್ಲಿ ಭಾಗವಹಿಸಲು ದೆಹಲಿಗೆ ತೆರಳಲಿರುವ ಡಿಕೆಶಿ
- ನರೇಗಾ ಹೋರಾಟಕ್ಕೆ ಸಂಬಂಧಿಸಿದಂತೆ 20, 21ರಂದು ನಡೆಯಲಿರುವ ಸಭೆಯಲ್ಲಿ ಸಿಎಂ ಭಾಗಿ
- ಈ ಎರಡು ದಿನಗಳ ಅವಧಿಯಲ್ಲಿ ಹೈಕಮಾಂಡ್ ಜತೆ ಚರ್ಚಿಸಿ ಸ್ಪಷ್ಟನೆ ಪಡೆಯುವ ಸಾಧ್ಯತೆ
- ಸಂಪುಟ ವಿಸ್ತರಣೆಯಾಗದಿದ್ದರೆ ಇನ್ನೊಂದು ವರ್ಷ ವಿಸ್ತರಣೆಯಾಗಲ್ಲ ಎನ್ನುವುದು ಸಿಎಂ ವಾದ
- ನಾಯಕತ್ವ ಬದಲಾವಣೆಯ ಗೊಂದಲಕ್ಕೆ ಸ್ಪಷ್ಟನೆ ನೀಡಿ ಎನ್ನುವುದು ಡಿಕೆಶಿ ಪ್ರತಿವಾದ

ರಾಹುಲ್ ಗಾಂಧಿಯವರು ಗೂಡಲೂರಿಗೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಭಾಗವಹಿಸಲು ಹೋಗುತ್ತಿದ್ದು, ಮಾರ್ಗ ಮಧ್ಯೆ ಭೇಟಿ ಮಾಡಲಾಗಿದೆ. ಸಂಜೆ ದೆಹಲಿಗೆ ತೆರಳುವಾಗಲೂ ಬೀಳ್ಕೊಡಲಾಯಿತು. ಈ ವೇಳೆ ಯಾವುದೇ ರಾಜಕೀಯ ಚರ್ಚೆ ನಡೆದಿಲ್ಲ.
-ಸಿದ್ದರಾಮಯ್ಯ, ಮುಖ್ಯಮಂತ್ರಿ

ಎರಡು ಸಾವಿರ ಜನರ ಸಾವು | ಮುಲ್ಲಾಗಳ ವಿರುದ್ಧ ಆಕ್ರೋಶ, ಮಸೀದಿಗಳಿಗೆ ಬೆಂಕಿ
ಇರಾನ ಹೈರಾಣ

ಟೆಹರಾನ್‌ನಲ್ಲಿ ನಡೆದ ಸರಕಾರದ ಪರ ರ್‍ಯಾಲಿಯ ಲ್ಲಿ ಲಕ್ಷಾಂತರ ಇರಾನಿಯನ್ನರು ಭಾಗವಹಿಸಿದ್ದರು.

ಟೆಹರಾನ್: ಇರಾನ್‌ನಲ್ಲಿ ನಡೆಯುತ್ತಿರುವ ಪ್ರತಿಭಟನೆ ಯಲ್ಲಿ ಈವರೆಗೆ ಸುಮಾರು 2,000 ಮಂದಿ ಮೃತಪಟ್ಟಿದ್ದಾರೆ ಎಂದು ವರದಿಯಾಗಿದೆ. ಅಲ್ಲದೆ ಪ್ರತಿಭಟನಾಕಾರರು ಸುಮಾರು 350ಕ್ಕೂ ಹೆಚ್ಚು ಮಸೀದಿಗಳಿಗೆ ಬೆಂಕಿ ಹಚ್ಚಿದ್ದಾರೆ. 'ಮುಲ್ಲಾಗಲೇ ದೇಶ ಖಾಲಿ ಮಾಡಿ' ಎಂದು ಬೀದಿಗಿಳಿದು ಘೋಷಣೆ ಕೂಗುತ್ತಿದ್ದಾರೆ.

ಅದಾಗ್ಯೂ, ಸರಕಾರದ ವಿರುದ್ಧ ನಡೆಯುತ್ತಿದ್ದ ಪ್ರತಿಭ ಟನೆ ತಕ್ಕ ಮಟ್ಟಿಗೆ ಹತೋಟಿಗೆ ಬಂದಿದ್ದು, ಇರಾನ್‌ನಲ್ಲಿ ಕಳೆದ ಕೆಲವು ದಿನಗಳಿಂದ ನಿರ್ಬಂಧಿಸಲಾಗಿದ್ದ ಅಂತಾರಾಷ್ಟ್ರೀಯ ಫೋನ್ ಕರೆಗಳು ಪುನರಾರಂಭಗೊಂಡಿವೆ. ಆದರೆ ಹೊರಹೋಗುವ ಕರೆಗಳಿಗೆ ಮಾತ್ರ ಅವಕಾಶ ನೀಡಲಾಗಿದೆ. ಈ ನಡುವೆ ಪ್ರತಿಭಟನಾಕಾರರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವುದಾಗಿ ಸರಕಾರ ಎಚ್ಚರಿಸಿದೆ.

'ನಾಗರಿಕರು ಮತ್ತು ಭದ್ರತಾ ಸಿಬ್ಬಂದಿಯ ಸಾವಿಗೆ ಭಯೋತ್ಪಾದಕರು ಕಾರಣ. ಇದು ಭಯೋತ್ಪಾದಕರ ವಿರುದ್ಧದ ಯುದ್ಧ' ಎಂದು ಇರಾನ್ ಅಧಿಕಾರಿಗಳು ಹೇಳಿದ್ದಾರೆ.

ಇರಾನ್ ಜತೆ ವ್ಯವಹಾರ ನಡೆಸುವ ದೇಶಗಳ ಮೇಲೆ ಶೇ.25ರಷ್ಟು ತೆರಿಗೆ: ಇರಾನ್ ಜತೆ ವ್ಯವಹಾರ ನಡೆಸುವ ದೇಶಗಳ ವಿರುದ್ಧ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸೋಮವಾರ ವ್ಯಾಪಕ ವ್ಯಾಪಾರ ಎಚ್ಚರಿಕೆಯನ್ನು ಘೋಷಿಸಿದ್ದು, ಅಂತಹ ರಾಷ್ಟ್ರಗಳ ಮೇಲೆ ಶೇ.25ರಷ್ಟು ದಂಡ ರೂಪದ ಹೊಸ ತೆರಿಗೆಗಳನ್ನು ವಿಧಿಸಲಾಗುವುದು ಎಂದು ಹೇಳಿದ್ದಾರೆ. ಇರಾನ್ ಇಸ್ಲಾಮಿಕ್ ಗಣರಾಜ್ಯದೊಂದಿಗೆ ವ್ಯವಹಾರ ನಡೆಸುವ ಯಾವುದೇ ದೇಶವು ತಕ್ಷಣದಿಂದ ಜಾರಿಗೆ ಬರುವಂತೆ, ಅಮೆರಿಕದ ಜತೆ ನಡೆಸುವ ಯಾವುದೇ ವ್ಯವಹಾರ ಮತ್ತು ಎಲ್ಲ ವ್ಯವಹಾರಗಳ ಮೇಲೆ ಶೇ.25ರಷ್ಟು ಸುಂಕ ಪಾವತಿಸಬೇಕು. ಈ ಆದೇಶವು ಅಂತಿಮ ಮತ್ತು ನಿರ್ಣಾಯಕವಾಗಿದೆ ಎಂದು ಟ್ರಂಪ್ ತಿಳಿಸಿದ್ದಾರೆ. ಇರಾನ್‌ನ ಪ್ರಮುಖ ವ್ಯಾಪಾರ ಪಾಲುದಾರರಲ್ಲಿ ಚೀನಾ, ಟರ್ಕಿ, ಭಾರತ, ಯುಎಇ, ಪಾಕಿಸ್ತಾನ ಮತ್ತು ಅರ್ಮೇನಿಯಾ ಸೇರಿವೆ. ಟ್ರಂಪ್ ಅವರ ಘೋಷಣೆಯು ಇತ್ತೀಚಿನ ವರ್ಷಗಳಲ್ಲಿ ಇರಾನ್‌ನ ಐದು ದೊಡ್ಡ ವ್ಯಾಪಾರ ಪಾಲುದಾರರಲ್ಲಿ ಒಂದಾಗಿರುವ ಭಾರತದ ಮೇಲೆ ಪರಿಣಾಮ ಬೀರಬಹುದು ಎನ್ನಲಾಗಿದೆ. → 4

- ಇರಾನ್‌ನ 31 ಪ್ರಾಂತ್ಯಗಳಲ್ಲಿ 600ಕ್ಕೂ ಹೆಚ್ಚು ಪ್ರತಿಭಟನೆ
- ಈವರೆಗೆ 10 ಸಾವಿರಕ್ಕೂ ಹೆಚ್ಚು ಮಂದಿ ಬಂಧನ, ಇಂಟರ್‌ನೆಟ್ ಕಡಿತ

ಸರಕಾರದ ಪರ ಬೀದಿಗಳಿದ ಜನ

ಸರಕಾರದ ವಿರುದ್ಧ ನಡೆಯುತ್ತಿದ್ದ ಪ್ರತಿಭಟನೆ ತಕ್ಕ ಮಟ್ಟಿಗೆ ಹತೋಟಿಗೆ ಬಂದ ಬೆನ್ನಲ್ಲೇ, ಟೆಹರಾನ್‌ನಲ್ಲಿ ಸರಕಾರಕ್ಕೆ ಬೆಂಬಲ ಸೂಚಿಸಿ ಸಾವಿರಾರು ಮಂದಿ ಬೀದಿಗಿಳಿದು ಪ್ರತಿಭಟನೆ ನಡೆಸಿದ್ದಾರೆ. ರ್‍ಯಾಲಿ ಮಾಡಿದ ಪ್ರತಿಭಟನಾಕಾರರು ಸರಕಾರದ ಪರ ಘೋಷಣೆಗಳನ್ನು ಕೂಗಿದ ಫಲಕಗಳನ್ನು ಪ್ರದರ್ಶಿಸಿದರು.

ಸೊಂಪಾದ ಪುಟಗಳು

ಕಟ್ರ ಈದಾ ಎನ್ನುವುದನ್ನು ಬ್ರಿಟಿಷ್ ಆಡಳಿತವೇ ಒಪ್ಪಿರಲಿಲ್ಲ!
ಜನಪಥ
ರಾಘವ ಶರ್ಮ ನಿಡ್ಲೆ 6

ಕಾಸರಗೋಡಿನ ಮಲಯಾಳೀಕರಣಕ್ಕೆ ನಾವೂ ಕಾರಣ !
ಲೋಕಮತ
ಲೋಕೇಶ್ ಕಾಯರ್ಗ 7

ದಾರಿದೀಪೋಕ್ತಿ

ಜಗತ್ತು ನಿಮ್ಮನ್ನು ಹೇಗೆ ನೋಡುತ್ತದೆ ಎನ್ನುವುದಕ್ಕಿಂತ, ನೀವು ನಿಮ್ಮನ್ನು ಹೇಗೆ ನೋಡಿಕೊಳ್ಳುತ್ತೀರಿ ಎಂಬುದು ಮುಖ್ಯ. ನಿಮ್ಮ ಮೇಲಿರುವ ಆತ್ಮವಿಶ್ವಾಸವೇ ನಿಮ್ಮ ಅತಿದೊಡ್ಡ ಶಕ್ತಿ; ಆ ಶಕ್ತಿಯು ಬೆಟ್ಟದಂತಹ ಸವಾಲನ್ನೂ ಪುಡಿಪುಡಿ ಮಾಡುವ ಸಾಮರ್ಥ್ಯ ಹೊಂದಿದೆ.

ವಕ್ರತುಂಡೋಕ್ತಿ

ಟ್ರಾಫಿಕ್‌ಜಾಮ್‌ನಲ್ಲಿ ಸಿಕ್ಕಿಹಾಕಿಕೊಂಡಾಗ ಹೆಂಡತಿಗೆ ಫೋನ್ ಮಾಡಿ ಇನ್ನರ್ಧ ಗಂಟೆಯಲ್ಲಿ ಬರ್ತೀನಿ' ಎಂದು ಹೇಳುವುದಕ್ಕೆ ಜಗತ್ತಿನ ಅತಿ ದೊಡ್ಡ ಕಾಲ್ಪನಿಕ ಕಥೆ ಎನ್ನಬಹುದು.

ವೀಸಾಮುಕ್ತ ಜರ್ಮನಿ ಪ್ರವೇಶ

ದೆಹಲಿ: ಜರ್ಮನಿಯು ತನ್ನ ವಿಮಾನ ನಿಲ್ದಾಣಗಳ ಮೂಲಕ ಪ್ರಯಾಣಿಸುವ ಭಾರತೀಯ ಪಾಸ್‌ಪೋರ್ಟ್ ಹೊಂದಿರುವವರಿಗೆ ವೀಸಾ ಮುಕ್ತ ಪ್ರಯಾಣ ಸೌಲಭ್ಯ ಘೋಷಿಸಿದೆ. ಇದು ಭಾರತೀಯ ಪ್ರಜೆಗಳಿಗೆ ಅಂತಾರಾಷ್ಟ್ರೀಯ ಪ್ರಯಾಣವನ್ನು ಗಮನಾರ್ಹವಾಗಿ ಸುಗಮಗೊಳಿಸುತ್ತದೆ. ಎರಡೂ ದೇಶಗಳ ನಡುವಿನ ಜನರ ಸಂಬಂಧವನ್ನು ಬಲಪಡಿಸುತ್ತದೆ ಎಂದು ನಿರೀಕ್ಷಿಸಲಾಗಿದೆ. ಜರ್ಮನಿ ಚಾನ್ಸಲರ್ ಫ್ರೆಡ್ರಿಕ್ ಮೆರ್ಜ್ ಅವರ ಭಾರತ ಭೇಟಿಯ ಬೆನ್ನಲ್ಲೇ ಬಿಡುಗಡೆಯಾದ ಅಧಿಕೃತ ಹೇಳಿಕೆಯಲ್ಲಿ ಭಾರತ-ಜರ್ಮನಿ ಜಂಟಿ ಹೇಳಿಕೆಯಲ್ಲಿ ಈ ನಿರ್ಧಾರವನ್ನು ಘೋಷಿಸಿವೆ. ಈ ನಿರ್ಧಾರದ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಜರ್ಮನಿ ಚಾನ್ಸಲರ್‌ಗೆ ಧನ್ಯವಾದ ಸಲ್ಲಿಸಿದ್ದಾರೆ.

1 ಲಕ್ಷ ಅಮೆರಿಕ ವೀಸಾ ರದ್ದು

ವಾಷಿಂಗ್ಟನ್: ಅಮೆರಿಕದ ಕಾನೂನು ಉಲ್ಲಂಘಿಸಿದವರು ಹಾಗೂ ಅಪರಾಧ ದಾಖಲೆಗಳನ್ನು ಹೊಂದಿರುವ 1 ಲಕ್ಷಕ್ಕೂ ಹೆಚ್ಚು ವಿದೇಶಿಗರ ವೀಸಾಗಳನ್ನು ಅಮೆರಿಕವು ಕಳೆದ ವರ್ಷ ರದ್ದುಪಡಿಸಿದೆ ಎಂದ ವರದಿಯಾಗಿದೆ. ಈ ವೀಸಾಗಳ ಪೈಕಿ 8,000 ವಿದ್ಯಾರ್ಥಿ ವೀಸಾಗಳು ಹಾಗೂ 2,500 ವಿಶೇಷ ಉದ್ಯೋಗ ವೀಸಾಗಳು ಸೇರಿವೆ ಎಂದು ಅಮೆರಿಕ ವಿದೇಶಾಂಗ ಇಲಾಖೆ ತಿಳಿಸಿದೆ. ದೇಶದ ಭದ್ರತೆ ಬಲಪಡಿಸುವುದು ಹಾಗೂ ವಲಸೆ ನಿಯಂತ್ರಣ ಭಾಗವಾಗಿ ಈ ಕಟ್ಟುನಿಟ್ಟಿನ ಕ್ರಮಕೈಗೊಳ್ಳಲಾಗಿದೆ. ವೀಸಾ ಪಡೆದು ದೇಶ ಪ್ರವೇಶಿಸಿದ ನಂತರವೂ ಅವರ ಮೇಲೆ ನಿಗಾವಹಿಸಲಾಗುತ್ತದೆ ಎಂದು ಇಲಾಖೆ ಸ್ಪಷ್ಟಪಡಿಸಿದೆ.

ಲಕ್ಕುಂಡಿ ಗ್ರಾಮದಲ್ಲಿ ಮತ್ತಷ್ಟು ದ್ರವ್ಯ ಪತ್ತೆ

ಗದಗ: ಜಿಲ್ಲೆಯ ಲಕ್ಕುಂಡಿ ಗ್ರಾಮದಲ್ಲಿ ಚಿನ್ನದ ನಿಧಿ ದೊರೆತು ಎರಡ್ಮೂರು ದಿನಗಳು ಕಳೆಯುವಷ್ಟರಲ್ಲೇ ಅದೇ ಗ್ರಾಮದಲ್ಲಿ ಮತ್ತೆ ಪುರಾತನ ವಸ್ತುಗಳು ಮತ್ತು ಆಭರಣ ವಸ್ತುಗಳು ಪತ್ತೆಯಾಗಿವೆ. ಬಸಪ್ಪ ಬಡಿಗೇರ ಎಂಬುವವರಿಗೆ ಮುತ್ತು, ಹವಳ, ನೀಲಮಣಿ, ಸ್ಫಟಿಕ, ಬಿಳಿ ಹವಳ, ಕರಿಪುಕ್ಕಾ ಸೇರಿದಂತೆ ಹಲವು ವಸ್ತುಗಳುಳ್ಳ ನಿಧಿ ದೊರೆತಿದೆ. ಬಸಪ್ಪ ಬಡಿಗೇರ ಗ್ರಾಮದಲ್ಲಿ ಹಲವು ವರ್ಷಗಳಿಂದ ಶೋಧ ಕಾರ್ಯ ನಡೆಸುತ್ತಿದ್ದು, ಈ ಹಿಂದೆ ಸಾಕಷ್ಟು ಪುರಾತನ ಕಾಲದ ವಸ್ತುಗಳು ಅವರಿಗೆ ಸಿಕ್ಕಿದ್ದವು ಎನ್ನಲಾಗಿದೆ. ಅವುಗಳನ್ನೆಲ್ಲ ಅವರು ಸರಕಾರಕ್ಕೆ ಹಸ್ತಾಂತರ ಮಾಡಿದ್ದರು.

ಇಬ್ಬರು ಶಾಲಾ ಮಕ್ಕಳ ಅಪಹರಣ ಸುಖಾಂತ್ಯ

ಧಾರವಾಡ: ಇಲ್ಲಿನ ಕಮಲಾಪೂರ ಶಾಲೆಯ ಇಬ್ಬರು ಮಕ್ಕಳ ಅಪಹರಣ ಪ್ರಕರಣ ಸುಖಾಂತ್ಯಗೊಂಡಿದೆ. ಪೋಕ್ಸೋ ಪ್ರಕರಣದ ಹಿನ್ನೆಲೆಯುಳ್ಳ ಅಪಹರಣಕಾರ ಅಬ್ದುಲ್ ಕರೀಂ, ಜೋಯಿಡಾ ಬಳಿ ಬೈಕ್ ಅಪಘಾತಕ್ಕೀಡಾದಾಗ ಸಿಕ್ಕಿಬಿದ್ದಿದ್ದಾನೆ. ಮಕ್ಕಳಿಬ್ಬರೂ ಸುರಕ್ಷಿತವಾಗಿದ್ದು, ಈ ಘಟನೆಯು ಅಪಘಾತದಿಂದಾಗಿ ಬಯಲಾಗಿದೆ. 2018ರಲ್ಲಿ ಉತ್ತರ ಕನ್ನಡ ಜಿಲ್ಲೆಯ ಹಳಿಯಾಳದಲ್ಲಿ ಅಬ್ದುಲ್ ಕರೀಂ ಮೇಲೆ ಪೋಕ್ಸೋ ಕೇಸ್ ದಾಖಲಾಗಿತ್ತು. ಈತ ನಾಲ್ಕು ವರ್ಷಗಳ ಕಾಲ ಜೈಲುವಾಸ ಅನುಭವಿಸಿದ್ದ ಎಂದು ಹು-ಧಾ ಪೊಲೀಸ್ ಆಯುಕ್ತ ಎನ್.ಶಶಿಕುಮಾರ್ ತಿಳಿಸಿದ್ದಾರೆ.

ಮೆಟ್ರೋ ಕಿತ್ತಳೆ ಮಾರ್ಗಕ್ಕೆ ಸಿವಿಲ್ ಟೆಂಡರ್ ಆಹ್ವಾನ

ಬೆಂಗಳೂರು: ಬಹುನಿರೀಕ್ಷಿತ ಕಿತ್ತಳೆ ಮೆಟ್ರೋ ಮಾರ್ಗಕ್ಕಾಗಿ ನಮ್ಮ ಮೆಟ್ರೋ ಮೂರು ಪ್ಯಾಕೇಜ್‌ಗಳಲ್ಲಿ ಸಿವಿಲ್ ಟೆಂಡರ್ ಆಹ್ವಾನಿಸಿದ್ದು, ಪ್ರತ್ಯೇಕ ಬಜೆಟ್ ನೀಡಲಾಗಿದೆ. ಜೆ.ಪಿ. ನಗರದ ನಾಲ್ಕನೇ ಹಂತದಿಂದ ನಾಗರಬಾವಿವರೆಗಿನ ಕಾಮಗಾರಿಯನ್ನು ಒಳಗೊಂಡಿದ್ದು, ಫೆಬ್ರವರಿ 20ರಿಂದ 25ರೊಳಗಾಗಿ ಟೆಂಡರ್ ಸಲ್ಲಿಸಲು ಅವಕಾಶ ನೀಡಲಾಗಿದೆ. ಮೂರು ಪ್ಯಾಕೇಜ್‌ಗಳಿಗೂ ಪ್ರತ್ಯೇಕ ಬಜೆಟ್ ನೀಡಲಾಗಿದೆ. 2024ರ ಆಗಸ್ಟ್ 16ರಂದು ನಮ್ಮ ಮೆಟ್ರೋ ಕಿತ್ತಳೆ ಮಾರ್ಗದ ಯೋಜನೆಗೆ ಕೇಂದ್ರ ಸರಕಾರ ಅನುಮೋದನೆ ನೀಡಿತ್ತು.

ಬೀದಿ ನಾಯಿ ಕಚ್ಚಿದರೆ ರಾಜ್ಯಗಳಿಗೆ ಭಾರಿ ದಂಡ

ದೆಹಲಿ: ಬೀದಿ ನಾಯಿಗಳ ಕಡಿತದಿಂದ ಜನರಿಗೆ ಗಾಯ ಅಥವಾ ಸಾವು ಸಂಭವಿಸಿದರೆ ರಾಜ್ಯ ಸರಕಾರ ಭಾರಿ ಪರಿಹಾರ ನೀಡಬೇಕಾಗುತ್ತದೆ ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಪ್ರತಿ ನಾಯಿ ಕಡಿತದಿಂದ ಮಕ್ಕಳು, ವೃದ್ಧರಿಗೆ ಉಂಟಾಗುವ ಗಾಯ ಅಥವಾ ಸಾವು ಸಂಭವಿಸಿದರೆ, ರಾಜ್ಯವಾರು ಭಾರಿ ಪರಿಹಾರ ನಿಗದಿಪಡಿಸುವ ಸಾಧ್ಯತೆಯಿದೆ ಎಂದು ಎಚ್ಚರಿಸಿದೆ. ನಾಯಿಗಳಿಗೆ ಆಹಾರ ನೀಡುತ್ತಿದ್ದೇವೆ ಎಂದು ಹೇಳುವವರು ಅವುಗಳನ್ನು ನಿಮ್ಮ ಮನೆಗೆ ಕರೆದೊಯ್ಯಿರಿ. ನಾಯಿಗಳು ಏಕೆ ಕಚ್ಚಬೇಕು, ಜನರನ್ನು ಏಕೆ ಹೆದರಿಸಬೇಕು ಎಂದು ಪ್ರಶ್ನಿಸಿದೆ.

ಪೋಲಿಯೊ ಮುಕ್ತ ದೇಶವಾಗಿ 15 ವರ್ಷ

ದೆಹಲಿ: ಭಾರತವು ಪೋಲಿಯೊ ಮುಕ್ತ ದೇಶವಾಗಿ ಮಂಗಳವಾರಕ್ಕೆ (ಜ.13) 15 ವರ್ಷ ಪೂರ್ಣಗೊಂಡಿದೆ. ಇದು ದೇಶದ ಆರೋಗ್ಯ ಕ್ಷೇತ್ರದಲ್ಲಿನ ಮಹತ್ವದ ಸಾಧನೆಯಾಗಿದೆ. ಕೆಲವು ದಶಕಗಳ ಹಿಂದೆ ಜಗತ್ತಿನಲ್ಲೇ ಅತಿ ಹೆಚ್ಚು ಪೋಲಿಯೊ ಪೀಡಿತರಿದ್ದ ದೇಶಗಳಲ್ಲಿ ಭಾರತವು ಕೂಡ ಒಂದಾಗಿತ್ತು. ರಾಜಕೀಯ ಇಚ್ಛಾಶಕ್ತಿ ಹಾಗೂ ಸಮುದಾಯದ ಸಹಕಾರದಿಂದ ಕಳೆದ 15 ವರ್ಷಗಳಿಂದ ದೇಶದಲ್ಲಿ ಯಾವುದೇ ಪೋಲಿಯೊ ಪ್ರಕರಣಗಳು ದಾಖಲಾಗಿಲ್ಲ. ಈಗ ಭಾರತವು ಜಗತ್ತಿನ ಇತರ ದೇಶಗಳಿಗೆ ತಂತ್ರಜ್ಞಾನ ಹಾಗೂ ಲಸಿಕೆಯನ್ನು ಸರಬರಾಜು ಮಾಡುವ ಮೂಲಕ ಜಗತ್ತನ್ನು ಪೋಲಿಯೊ ಮುಕ್ತ ಮಾಡುವಲ್ಲಿ ಸಹಕರಿಸುತ್ತಿದೆ.

ಸರಣಿ ಪ್ರತಿಭಟನೆ ಮೂಲಕ ಸರಕಾರದ ವಿರುದ್ಧ ಜನಾಂದೋಲನಕ್ಕೆ ಚಿಂತನೆ
ಬಿಜೆಪಿಯಿಂದ ಪ್ರತಿಭಟನೆ ಪರ್ವ ಆರಂಭ

ಬೆಂಗಳೂರು: ರಾಜ್ಯ ಸರಕಾರ ವೈಫಲ್ಯಗಳನ್ನು ಖಂಡಿಸಿ ರಾಜ್ಯ ಬಿಜೆಪಿಯಿಂದ ಸರಣಿ ಪ್ರತಿಭಟನೆ ನಡೆಸಲು ತೀರ್ಮಾನಿಸಿದ್ದು, ಮುಂದಿನ ದಿನದಲ್ಲಿ ಪ್ರತಿಭಟನಾ ಪರ್ವ ಆರಂಭವಾಗಲಿದೆ.

ಮೊದಲಿಗೆ ಬಳ್ಳಾರಿಯಲ್ಲಿ ಶಾಸಕ ಜನಾರ್ದನ ರೆಡ್ಡಿ ಮೇಲಿನ ಹಲ್ಲೆಗೆ ಪ್ರಯತ್ನಿಸಿದ ಶಾಸಕ ಭರತ್ ರೆಡ್ಡಿ ಬಂಧನಕ್ಕೆ ಆಗ್ರಹಿಸಿ ಜ.17ರಂದು ಬಳ್ಳಾರಿಯಲ್ಲಿ ರಾಜ್ಯ ಬಿಜೆಪಿ ವತಿಯಿಂದ ಬೃಹತ್ ಸಮಾವೇಶ ನಡೆಸಲು ತೀರ್ಮಾನಿಸಿರುವ ನಾಯಕರು, ಪಾದಯಾತ್ರೆ ಸಂಬಂಧ ಹೈಕಮಾಂಡ್ ಜತೆ ಚರ್ಚಿಸಿ ತೀರ್ಮಾನಿಸಲು ನಿರ್ಧರಿಸಿದ್ದಾರೆ. ಈ ಬಗ್ಗೆ ಮಾತನಾಡಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಬಿ.ಶ್ರೀರಾಮುಲು, ಜನಾರ್ದನ ರೆಡ್ಡಿ ಅವರು ಪಾದಯಾತ್ರೆಗೆ ಅಪೇಕ್ಷೆ ವ್ಯಕ್ತಪಡಿಸಿದ್ದಾರೆ. ಇದನ್ನು ಹೈಕಮಾಂಡ್ ಗಮನಕ್ಕೆ ತಂದಿದ್ದೇನೆ. ಮುಂದಿನ ದಿನಗಳಲ್ಲಿ ಪಾದಯಾತ್ರೆ ಬಗ್ಗೆ ನಿರ್ಧಾರ ಕೈಗೊಳ್ಳಲಾಗುವುದು. ಪಾದಯಾತ್ರೆ ಮಾಡಬಾರದು ಅಂತ ಏನೂ ಇಲ್ಲ. ನಮಗೂ ಪಾದಯಾತ್ರೆ ಮಾಡುವ ಅಪೇಕ್ಷೆ ಇದೆ ಎಂದರು.

ಇನ್ನು ಗೃಹಲಕ್ಷ್ಮಿ ಬಾಕಿ ಪಾವತಿಗೆ ಆಗ್ರಹಿಸಿ ಹುಬ್ಬಳ್ಳಿಯಲ್ಲಿ ಹೋರಾಟ ಮಾಡಲಾಗುವುದು. ನಂತರ ಬಾಗಲಕೋಟೆಯಲ್ಲೂ ರೈತರ ವಿಚಾರವಾಗಿ ಹೋರಾಟ ಮಾಡಲಾಗುವುದು. ಸರಕಾರ ರಾಜ್ಯವನ್ನು ಕುಡುಕರ ರಾಜ್ಯ ಮಾಡಿದೆ. ಬಡವರ ಮನೆಗಳನ್ನು ಹಾಳು ಮಾಡುತ್ತಿದೆ. ಡ್ರಗ್ಸ್ ಹಾವಳಿ ರಾಜ್ಯದಲ್ಲಿ ಹೆಚ್ಚಾಗಿದ್ದು ಬೊಕ್ಕಸಕ್ಕೆ ಹಣ ಸಂಗ್ರಹ ಮಾಡಲಾಗದೇ ಜನರಿಗೆ ಹೆಂಡ ಕುಡಿಸಿ ಅಬಕಾರಿ ಆದಾಯ ಹೆಚ್ಚಳ ಮಾಡಿಕೊಳ್ಳಲು ಮುಂದಾಗಿದೆ. ತೆರಿಗೆ ಸಂಗ್ರಹಕ್ಕೆ ಟಾರ್ಗೆಟ್ ಕೊಡಲಾಗಿದೆ ಎಂದು ಆರೋಪಿಸಿದರು.

ಮಾದಕವಸ್ತು ಜಾಲದ ಕುರಿತು ಗಮನ ಸೆಳೆಯಲು ಹೋರಾಟ ರೂಪಿಸಲಿದ್ದೇವೆ. ಮೈಸೂರು ಮುಖ್ಯಮಂತ್ರಿ ಅವರ ತವರು ಜಿಲ್ಲೆ. ಅಲ್ಲಿದ್ದ ಮಾದಕವಸ್ತು ಕಾರ್ಖಾನೆಯನ್ನು ಮಹಾರಾಷ್ಟ್ರದ ಪೊಲೀಸರು ಬಂದು ಮುಚ್ಚಿಸಬೇಕಾಯಿತು. ಮೈಸೂರು ಒಳಗೊಂಡಂತೆ ರಾಜ್ಯಾದ್ಯಂತ ಡ್ರಗ್ಸ್ ಮಾಫಿಯಾ ಹರಡಿದೆ. ಇವನ್ನು ಪರಿಗಣಿಸಿ ಮೈಸೂರಿನಲ್ಲಿ ಹೋರಾಟ ಮಾಡಲಾಗುವುದು.
-ಬಿ.ವೈ.ವಿಜಯೇಂದ್ರ ಬಿಜೆಪಿ ರಾಜ್ಯಾಧ್ಯಕ್ಷ

ಕ್ವಿಕ್ ಕಾಮರ್ಸ್ ಕಂಪನಿಗಳಿಗೆ ಮನ್ಸುಖ್ ಮಾಂಡವಿಯಾ ಸೂಚನೆ
10 ನಿಮಿಷಗಳ ಡೆಲಿವರಿ ರದ್ದು

ದೆಹಲಿ: ಗಿಗ್ ಕಾರ್ಮಿಕರ ಸುರಕ್ಷತೆಯ ದೃಷ್ಟಿ ಯಿಂದ 10 ನಿಮಿಷಗಳ ವಿತರಣೆ ಸೇವೆಯನ್ನು ರದ್ದುಗೊಳಿಸಬೇಕು ಎಂದು ಕ್ವಿಕ್ ಕಾಮರ್ಸ್ ಕಂಪನಿಗಳಿಗೆ ಕೇಂದ್ರ ಕಾರ್ಮಿಕ ಸಚಿವ ಮನ್ಸುಖ್ ಮಾಂಡವಿಯಾ ಸೂಚಿಸಿದ್ದಾರೆ.

10 ನಿಮಿಷಗಳಲ್ಲಿ ವಿತರಣೆ ಮಾಡಬೇಕು ಎಂಬ ಒತ್ತಡದಲ್ಲಿ ಗಿಗ್ ಕಾರ್ಮಿಕರು ತಮ್ಮ ಪ್ರಾಣವನ್ನೇ ಪಣಕ್ಕಿಡುತ್ತಿದ್ದಾರೆ ಎಂದು ಎಎಪಿ ಸಂಸದ ರಾಘವ ಛಡ್ಡಾ ಸೇರಿ ಅನೇಕರು ಕೇಂದ್ರ ಸರಕಾರದ ಗಮನಕ್ಕೆ ತಂದಿದ್ದರು. ಮಂಗಳವಾರ ಬ್ಲಿಂಕ್ ಇಟ್, ಜೆಪ್ಟೊ, ಸ್ವಿಗ್ಗಿ ಮತ್ತು ಜೊಮಾಟೊ ಜತೆ ಸಭೆ ನಡೆಸಿರುವ ಸಚಿವರು, ಇಷ್ಟೇ ನಿಮಿಷದಲ್ಲಿ ಡೆಲಿವರಿ ಮಾಡ ಬೇಕೆಂಬ ಗಡುವು ನೀಡುವುದನ್ನು ನಿಲ್ಲಿಸಿ ಎಂದು ಸೂಚಿಸಿದ್ದಾರೆ. ಬ್ಲಿಂಕ್ ಇಟ್ ಈಗಾಗಲೇ 10 ನಿಮಿಷಗಳ ವಿತರಣೆ ಸೇವೆ ರದ್ದುಗೊಳಿಸಿದೆ.

ಸಕಾಲಿಕ ಕ್ರಮಕ್ಕೆ ಛಡ್ಡಾ ಧನ್ಯವಾದ

ಕೇಂದ್ರ ಸರಕಾರದ ನಿರ್ಧಾರವನ್ನು ಸ್ವಾಗತಿಸಿರುವ ರಾಘವ್ ಛಡ್ಡಾ, ಗಿಗ್ ಕಾರ್ಮಿಕರ ವಿಷಯದಲ್ಲಿ ಸಕಾಲಿಕ ಕ್ರಮ ತೆಗೆದುಕೊಂಡಿರುವುದಕ್ಕಾಗಿ ಧನ್ಯವಾದ ತಿಳಿಸಿದ್ದಾರೆ. ಇದು ತುಂಬಾ ಅಗತ್ಯವಿರುವ ಹೆಜ್ಜೆಯಾಗಿದೆ. ಒಂದು ಕಡೆ ಗಿಗ್ ಕಾರ್ಮಿಕರ ಟಿ-ಶರ್ಟ್, ಜಾಕೆಟ್, ಬ್ಯಾಗ್ ಮೇಲೆ 10 ನಿಮಿಷಗಳಲ್ಲಿ ವಿತರಣೆ ಎಂದು ಮುದ್ರಿಸಿರುವುದು, ಮತ್ತೊಂದೆಡೆ ಗ್ರಾಹಕರ ಫೋನ್ ಸ್ಕ್ರೀನ್ ಮೇಲೆ ಸಮಯ ಓಡುತ್ತಿರುವುದು, ಇದು ನಿಜಕ್ಕೂ ಕಾರ್ಮಿಕರ ಮೇಲೆ ಒತ್ತಡವನ್ನು ಹೇರುತ್ತಿತ್ತು ಎಂದು ತಿಳಿಸಿದ್ದಾರೆ.

ಕಾಂಗ್ರೆಸ್ ಮುಖಂಡರ ಸಭೆಯಲ್ಲಿ ಸಿಎಂ ಸಿದ್ದರಾಮಯ್ಯ ಘೋಷಣೆ
ಹೋರಾಟದಲ್ಲಿ ಭಾಗವಹಿಸದಿದ್ದರೆ ಕಠಿಣ ಕ್ರಮದ ಎಚ್ಚರಿಕೆ ನೀಡಿದ ಡಿಕೆ
ನರೇಗಾ ವಾಪಸಾಗೋ ತನಕ ಹೋರಾಟ

ಬೆಂಗಳೂರು: ಕೇಂದ್ರ ಸರಕಾರ ಜಾರಿಗೊಳಿಸಿರುವ ವಿಬಿ ಜಿ ರಾಮ್ ಜಿ ಯೋಜನೆ ರದ್ದುಪಡಿಸಿ, ಮನರೇಗಾ ಪುನರ್ ಸ್ಥಾಪಿಸುವ ತನಕ ನಮ್ಮ ಹೋರಾಟ ಮುಂದುವರಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದರು.

ಕೆಪಿಸಿಸಿ ವತಿಯಿಂದ ಆಯೋಜಿಸಿದ್ದ ಮನರೇಗಾ ಬಚಾವ್ ಸಂಗ್ರಾಮ ಪೂರ್ವಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ಯುಪಿಎ ಸರಕಾರದ ಅವಧಿಯಲ್ಲಿ ಗ್ರಾಮೀಣ ಪ್ರದೇಶದ ಬಡವರಿಗೆ ಕೆಲಸದ ಹಕ್ಕು ನೀಡಲು ನರೇಗಾ ಜಾರಿಗೊಳಿಸಲಾಯಿತು. 20 ವರ್ಷಗಳಿಂದ ಜಾರಿಯಲ್ಲಿದ್ದ ಕಾಯ್ದೆಯಡಿ 12.16 ಕೋಟಿ ಕಾರ್ಮಿಕರು ದೇಶದಲ್ಲಿ ಕೆಲಸ ಮಾಡುತ್ತಿದ್ದು, 6.21ಕೋಟಿ ಮಹಿಳೆಯರು ಕೆಲಸ ಮಾಡುತ್ತಿದ್ದಾರೆ. ಆದರೆ ಇದನ್ನು ರದ್ದುಪಡಿಸುವ ಮೂಲಕ ಗ್ರಾಮೀಣ ಭಾಗದವರ ಉದ್ಯೋಗವನ್ನು ಕೇಂದ್ರ ಸರಕಾರ ಕಸಿದುಕೊಂಡಿದೆ ಎಂದು ಟೀಕಿಸಿದರು. → 4



ಕೆಪಿಸಿಸಿ ವತಿಯಿಂದ ಆಯೋಜಿಸಿದ್ದ ಮನರೇಗಾ ಬಚಾವ್ ಸಂಗ್ರಾಮ ಪೂರ್ವಸಿದ್ಧತಾ ಸಭೆಯಲ್ಲಿ ಸಿಎಂ, ಡಿಸಿಎಂ ಸೇರಿದಂತೆ ಎಲ್ಲ ಕಾಂಗ್ರೆಸ್ ನಾಯಕರು ಕೈ ಕೈ ಹಿಡಿದು ಮೇಲಕ್ಕೆತ್ತುವ ಮೂಲಕ ಶಕ್ತಿ ಪ್ರದರ್ಶನ ಮಾಡಿದರು.

ಜ.26ರಿಂದ ಫೆ.7ರವರೆಗೆ ಎಲ್ಲ ವಿಧಾನಸಭೆ ಕ್ಷೇತ್ರ ಮಟ್ಟದಲ್ಲಿ 5-10 ಕಿ.ಮೀ ಪಾದಯಾತ್ರೆ ಮಾಡಬೇಕು. ಇದರಲ್ಲಿ ಎಲ್ಲ ಗ್ರಾಮ ಪಂಚಾಯಿತಿ ಸದಸ್ಯರು, ನಮ್ಮ ನಾಯಕರು, ಶಾಸಕರು ಹಾಗೂ ಸಚಿವರ ನೇತೃತ್ವದಲ್ಲಿ ಪಾದಯಾತ್ರೆ ಮಾಡಬೇಕು. ಶಿಕಾರಿಪುರ ಸೇರಿದಂತೆ ಐದಾರು ಕಡೆ ಪಾದಯಾತ್ರೆ ಮಾಡಲು ನಾನೇ ಖುದ್ದಾಗಿ ಬರುತ್ತೇನೆ. ಎಲ್ಲಿ ಶಾಸಕರಿಲ್ಲವೋ ಆ ಕ್ಷೇತ್ರಗಳಲ್ಲಿ ನಾನು ಪಾದಯಾತ್ರೆ ಮಾಡುತ್ತೇನೆ. ಪಕ್ಷ ಸಂಘಟನೆ ಮಾಡುವ ನಿಟ್ಟಿನಲ್ಲಿ ಇದು ಬಹಳ ಪ್ರಮುಖ ವಿಚಾರ.
-ಡಿ.ಕೆ.ಶಿವಕುಮಾರ್ ಉಪಮುಖ್ಯಮಂತ್ರಿ

ವಿಶೇಷ ಅಧಿವೇಶನಕ್ಕೂ ಮುನ್ನ ಗವರ್ನರ್ ಭಾಷಣಕ್ಕೆ ಸರಕಾರದ ಸರಕು ಸಿದ್ಧ
ರಾಜ್ಯಪಾಲರ ಬಾಯಲ್ಲಿ ನರೇಗಾ ಜಪ?

ಬೆಂಗಳೂರು: ವಿಬಿ ರಾಮ್ ಜಿ ವಿರುದ್ಧ ಸಮರ ಸಾರಿರುವ ಕಾಂಗ್ರೆಸ್, ಇದೀಗ ಕೇಂದ್ರದ ಈ ತೀರ್ಮಾನವನ್ನು ರಾಜ್ಯಪಾಲರ ಬಾಯಲ್ಲಿಯೇ ಟೀಕಿಸುವ ಲೆಕ್ಕಾಚಾರದಲ್ಲಿದೆ.

ನರೇಗಾ ಬದಲು ಕೇಂದ್ರ ಸರಕಾರ ಜಾರಿಗೊಳಿಸಿರುವ ವಿಬಿ ರಾಮ್ ಜಿ ಯೋಜನೆ ಯನ್ನು ರಾಜ್ಯಪಾಲರ ಭಾಷಣದಲ್ಲಿ ಟೀಕಿಸುವ ಜತೆಗೆ, ನರೇಗಾ ಯೋಜನೆಯಿಂದಾಗಿರುವ ಲಾಭಗಳ ಬಗ್ಗೆಯೂ ಪ್ರಸ್ತಾಪಿಸುವಂತೆ ನೋಡಿಕೊಳ್ಳಲು ಸರಕಾರ ಚಿಂತನೆ ನಡೆಸಿದೆ. ಜಂಟಿ ಅಧಿವೇಶನದ ಭಾಷಣವನ್ನು ಸರಕಾರ ಸಿದ್ಧಪಡಿಸಿಕೊಡುವುದರಿಂದ, ಕೇಂದ್ರದ ನಡೆಯ ವಿರುದ್ಧ ಕೆಲ ಅಂಶಗಳನ್ನು ಸೇರಿಸಲು ತೀರ್ಮಾನಿಸಲಾಗಿದೆ.

ಈ ಬಗ್ಗೆ ಬುಧವಾರ ನಡೆಯಲಿರುವ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ, ಯಾವ ರೀತಿಯಲ್ಲಿ ಮುಂದುವರಿಯಬೇಕು ಎನ್ನುವ ಅಂತಿಮ ತೀರ್ಮಾನ ಕೈಗೊಳ್ಳುವ ಸಾಧ್ಯತೆಯಿದೆ. ಪ್ರಮುಖವಾಗಿ, ನರೇಗಾ ಸಂಬಂಧ ಚರ್ಚಿಸಲು ಎರಡು ದಿನ ವಿಶೇಷ ಅಧಿವೇಶನ ಕರೆಯುವುದಾಗಿ ಸರಕಾರ ಹೇಳಿತ್ತು. ಆದರೆ ವಿಶೇಷ ಅಧಿವೇಶನ ಕರೆಯಲು ಇರುವ ತಾಂತ್ರಿಕ ಸಮಸ್ಯೆ, ಜಂಟಿ ಸದನವನ್ನು ಉದ್ದೇಶಿಸಿ ರಾಜ್ಯಪಾಲರು ಮಾಡುವ ಭಾಷಣದಲ್ಲಿ ಯಾವೆಲ್ಲ ಅಂಶಗಳನ್ನು ಸೇರಿಸಬೇಕು ಎನ್ನುವ ಬಗ್ಗೆ ಚರ್ಚಿಸುವ ಸಾಧ್ಯತೆಯಿದೆ. ಬಳಿಕ ಜಂಟಿ ಅಧಿವೇಶನದ ದಿನಾಂಕ ನಿರ್ಧಾರವಾಗಲಿದೆ ಎನ್ನಲಾಗಿದೆ.

ಇದರೊಂದಿಗೆ ಬುಧವಾರ ನಡೆಯಲಿರುವ ವಿಶೇಷ ಸಚಿವ ಸಂಪುಟ ಸಭೆಯಲ್ಲಿ, ರಾಮ್ ಜಿ ಕಾಯಿದೆಯ ವಿರುದ್ಧ ಯಾವ ರೀತಿಯಲ್ಲಿ ಕಾನೂನು ಹೋರಾಟ ಕೈಗೊಳ್ಳಬೇಕು ಎನ್ನುವ ಬಗ್ಗೆ ಚರ್ಚಿಸುವ ಸಾಧ್ಯತೆಯಿದೆ. ಜ.20, 21ರಂದು ದೆಹಲಿಯಲ್ಲಿ ಕಾಂಗ್ರೆಸ್ ಹೈಕಮಾಂಡ್ ಎರಡನೇ ಸುತ್ತಿನ ಸಭೆ ಕರೆದಿರುವುದರಿಂದ ಅಲ್ಲಿಗೆ ತೆರಳುವ ಮೊದಲು ಕರ್ನಾಟಕ ಸರಕಾರ ವಿಬಿ ರಾಮ್ ಜಿ ಕಾಯಿದೆ ವಿರುದ್ಧ ಕೈಗೊಳ್ಳಲಿರುವ ಕ್ರಮಗಳ ಬಗ್ಗೆ ಸ್ಪಷ್ಟನೆ ಪಡೆಯಲು ಸಿದ್ದರಾಮಯ್ಯ ತೀರ್ಮಾನಿಸಿದ್ದಾರೆ. ಆದ್ದರಿಂದ ಬುಧವಾರದ ಸಂಪುಟ ಸಭೆ ಮಹತ್ವ ಪಡೆದಿದೆ.

ತಾಂತ್ರಿಕ ಸಮಸ್ಯೆ

ಈ ಹಿಂದೆ 2 ದಿನಗಳ ವಿಶೇಷ ಅಧಿವೇಶನ ಕರೆಯುವುದಾಗಿ ಸಿಎಂ, ಡಿಸಿಎಂ ಹೇಳಿದ್ದರು. ಆದರೆ ವರ್ಷದ ಮೊದಲ ಅಧಿವೇ ಶನ ರಾಜ್ಯಪಾಲರ ಜಂಟಿ ಅಧಿವೇಶನದ ಮೂಲಕವೇ ಆರಂಭವಾಗಬೇಕು ಎನ್ನುವ ನಿಯಮ ವಿರುವುದರಿಂದ, ರಾಜ್ಯಪಾಲರ ಭಾಷಣ ಮಾಡದೇ ವಿಶೇಷ ಅಧಿವೇಶನ ಕರೆಯಲು ಸಾಧ್ಯವಿರಲಿಲ್ಲ. ಆದ್ದರಿಂದ 2 ದಿನದ ಅಧಿವೇಶನವನ್ನು ವಿಶೇಷ ಅಧಿವೇಶನ ವೆಂದು ಕರೆಯುವ ಬದಲು, ಮೊದಲಿಗೆ ರಾಜ್ಯಪಾಲರ ಭಾಷಣ ಮಾಡಿಸಿ, ಬಳಿಕ ಒಂದೂವರೆ ದಿನ ವಿಶೇಷ ಅಧಿವೇಶನ ನಡೆಸಿ, ಬಳಿಕ ಬಜೆಟ್ ಅಧಿವೇಶನಕ್ಕೂ ಒಂದು ವಾರ ಮೊದಲು ರಾಜ್ಯಪಾಲರ ಭಾಷಣದ ಮೇಲೆ ಚರ್ಚೆಗೆ ಅವಕಾಶ ನೀಡಿ ಬಳಿಕ ಬಜೆಟ್ ಅಧಿವೇಶನ ನಡೆಸುವುದು ಸರಕಾರದ ಲೆಕ್ಕಾಚಾರವಾಗಿದೆ.

ಫನ್‌ತರಂಗ
- ರಘುಪತಿ ಶೃಂಗೇರಿ -

10 ನಿಮಿಷಗಳ ಫುಡ್ ಡೆಲಿವರಿಗೆ ಬ್ರೇಕ್
ಸುದ್ದಿ



PUBLIC NOTICE

This is inform the General Public, **Sri. Yogesh M** s/o Mayannagowda, is sale agreement holder of the immovable property mentioned in the schedule herein and he has lost the original registered sale Agreement dated 19.07.2021, bearing documents no.NGM-1-00583-2021-22,Stored in CD no.NGMD691, Book no-1 at the sub-register office at Nagamangala Taluk, registered in favour of Yogesh M from Shivannagowda and others said original sale agreement date 19.07.2021 have been misplaced in Bengaluru City on 29/10/2025, and not traceable yet. The report of the same has been online complaint lodged at the Bangalore City police station on 18.11.2025, vide lost report no. 1908911/2025. The Pertaining to schedule property in case anybody having any claims or in possession of the said documents shall inform the under signed and handover the same within in seven days from the date of publication of this notice.

If found, kindly inform to at 1.Sri. Yogesh M son of Mayannagowda. aged about 52 years, residing at J C Nagar, Kurubarahalli, near Sathyanarayana layana Mantapa, Bengaluru -560086, Mobile no.9880470955

SCHEDULE PROPERTY

All that piece and parcel of agricultural land bearing Survey No. 76/B, situated at Kallenahalli, Village, Honakere Hobli, Ngamangala Taluk, Mandya District, measuring 1 acres 1 Guntas, and bounded as follows :- **East by :** Land belongs to Eregowda, **West by :** Land belongs to Bhadraiah,, **North by :** Land belongs to Mahesh, **South by :** Government Hospital and 20 feet Road, In between the said boundaries the in all 0.9 guntas

Sri. Yogesh M

ಮಾನ್ಯ ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ ಕನಕಪುರ
ಸಿ.ಮಿಸ್.ನಂ.734/2025

ಅರ್ಜಿದಾರರು: 1. ಶ್ರೀ. ಮಂಜುನಾಥ ಬಿ.ವಿ. ಬಿನ್ ಲೇಟ್ ವೆಂಕಟಪ್ಪ, ವಯಸ್ಸು: 43 ವರ್ಷ. 2. ಶ್ರೀಮತಿ. ಜಯಮ್ಮ ಕೋಂ ವೆಂಕಟಪ್ಪ, ವಯಸ್ಸು: 77 ವರ್ಷ. 3. ಶ್ರೀ ದಾಸಪ್ಪ. ವಿ. ಬಿನ್ ಲೇಟ್ ವೆಂಕಟಪ್ಪ, ವಯಸ್ಸು 61 ವರ್ಷ. 4. ಶ್ರೀ.ಬಿ.ವಿ. ರಮೇಶ ಬಿನ್ ಲೇಟ್ ವೆಂಕಟಪ್ಪ, ವಯಸ್ಸು 57 ವರ್ಷ. 5. ಶ್ರೀಮತಿ.ರತ್ನಮ್ಮ. ಬಿನ್ ಲೇಟ್ ವೆಂಕಟಪ್ಪ, ವಯಸ್ಸು 43 ವರ್ಷ, 6. ಶ್ರೀ. ಶ್ರೀನಿವಾಸ ಮೂರ್ತಿ. ಬಿನ್ ಲೇಟ್ ವೆಂಕಟಪ್ಪ, ವಯಸ್ಸು 63 ವರ್ಷ.

ವಿರುದ್ಧ

ಪ್ರತಿ ಅರ್ಜಿದಾರರು : 1. ಮಾನ್ಯ ತಹಸೀಲ್ದಾರ್ ರವರು ಜನನ ಮತ್ತು ಮರಣ ನೋಂದಣಾಧಿಕಾರಿಗಳು, ಹಾರೋಹಳ್ಳಿ ತಾಲ್ಲೂಕು. ಹಾರೋಹಳ್ಳಿ. 2. ಗ್ರಾಮ ಲೆಕ್ಕಾಧಿಕಾರಿಗಳು, ಹಾರೋಹಳ್ಳಿ ವೃತ್ತ. ಹಾರೋಹಳ್ಳಿ ಹೋಬಳಿ, ಹಾರೋಹಳ್ಳಿ ತಾಲ್ಲೂಕು.

ಪ್ರಕಟಣೆ

ಮೇಲ್ಕಂಡ ಅರ್ಜಿದಾರಾದ 1ನೇ, 3 ರಿಂದ 6ನೇ ಅರ್ಜಿದಾರ ತಾತ, 2ನೇ ಅರ್ಜಿದಾರರ ಮಾವನಾದ ಮೃತ "ಕುರುಬರಹಳ್ಳಿ ದಾಸೇಗೌಡ ಬಿನ್ ತಿಮ್ಮೇಗೌಡ" ರವರು ದಿನಾಂಕ: 25-10-1950 ರಂದು ಅರ್ಜಿದಾರರ ವಿಳಾಸವಾದ ದೊಡ್ಡಬಾದಗೆರೆ ಗ್ರಾಮ, ಹಾರೋಹಳ್ಳಿ ಹೋಬಳಿ, ಹಾರೋಹಳ್ಳಿ ತಾಲ್ಲೂಕು, ಬೆಂಗಳೂರು ದಕ್ಷಿಣ ಜಿಲ್ಲೆ. ಈ ವಿಳಾಸದಲ್ಲಿ ಮರಣ ಹೊಂದಿದ್ದು, ಅರ್ಜಿದಾರರು ಸದರಿ ಕುರುಬರಹಳ್ಳಿ ದಾಸೇಗೌಡ ರವರ ಮರಣ ಪ್ರಮಾಣ ಪತ್ರವನ್ನು ಪಡೆಯುವ ಉದ್ದೇಶದಿಂದ ಮಾನ್ಯ ನ್ಯಾಯಾಲಯದಲ್ಲಿ ಸದರಿ ಅರ್ಜಿಯನ್ನು ಸಲ್ಲಿಸಿದ್ದು, ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಯಾರಿಗಾದರೂ ಹಿತಾಶಕ್ತಿ ಅಥವಾ ತಕರಾರು ಇದ್ದಲ್ಲಿ ಅವರು ಮಾನ್ಯ ನ್ಯಾಯಾಲಯದಲ್ಲಿ ಖುದ್ದಾಗಿ ಅಥವಾ ಅವರ ವಕೀಲರ ಮೂಲಕ ಹಾಜರಾಗಿ ತಮ್ಮ ಪರ ತಕರಾರು ಸಲ್ಲಿಸಬಹುದಾಗಿರುತ್ತದೆ. ಮಾನ್ಯ ನ್ಯಾಯಾಲಯದಲ್ಲಿ ದಿನಾಂಕ : 21/02/26 ರಂದು ಬೆಳಿಗ್ಗೆ 11-00 ಗಂಟೆಗೆ ನ್ಯಾಯಾಲಯಕ್ಕೆ ಹಾಜರಾಗಿ ತಕರಾರು ಸಲ್ಲಿಸತಕ್ಕದ್ದು. ತಪ್ಪಿದ್ದಲ್ಲಿ ಮಾನ್ಯ ನ್ಯಾಯಾಲಯವು ಗೈರು ಹಾಜರಿ ಎಂದು ಪರಿಗಣಿಸಿ ಆದೇಶಿಸುತ್ತದೆ.

ದಿನಾಂಕ: 12/01/2026 ರಂದು ನನ್ನ ಸಹಿ ಮತ್ತು ನ್ಯಾಯಾಲಯದ ಮೊಹರಿನೊಂದಿಗೆ ಆದೇಶಿಸಲಾಗಿದೆ.

ಮಾನ್ಯ ನ್ಯಾಯಾಲಯದ ಆದೇಶದ ಮೇರೆಗೆ
ಶಿರಸ್ತೆದಾರರು,
ಮಾನ್ಯ ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಕನಕಪುರ

ಅರ್ಜಿದಾರರ ಪರ ವಕೀಲರು
ಬಿ.ಎಸ್. ನಾರಾಯಣಗೌಡ,
ವಕೀಲರು, ಕನಕಪುರ ಟೌನ್
ಸ್ಥಳ : ಕನಕಪುರ

IN THE COURT OF THE CIVIL JUDGE AND JMFC COURT & AT SANDUR
O S NO. 214/2024
BETWEEN : Smt. Manju Bachawat ...Plaintiff
AND : Smt. Anju Jain and others ...Defendants
SUMMONS

Whereas the Plaintiff above named has instituted **O.S. No. 214/2024** before the Hon'ble Civil Judge, Sandur **seeking declaration and permanent injunction** against the Defendants.

To,
Defendant No. 7 : Smt. Rani,
D/o Late Sri. Uday Chand Singhi, Age: 51 years Occ: Household, R/ at 101.1st Floor, Abhijeet Apartment, VV Puram , Bangalore-560004.

You are hereby summoned to appear before the **Hon'ble Civil Judge & JMFC at Sandur, on the 20th day of Feb 2026 at 11.00 A.M.** in person or by pleader duly instructed and able to answer all material questions relating to the suit or who shall be instructed and able to answer all such question on the day of at about 11:00 "O" clock in the forenoon to answer the claim and further you are hereby directed to file on that day your objections and to produce on the said day all documents in your possession or power upon which, you base your defense or claim for set off or counter claim in support of your defense. Take notice that, in default of your appearance the suit will be **heard and decided ex parte** against you in accordance with law.

Given under my hand and seal of this court on this **12th day of January 2026.**

By Order Of The Court, Shirestedar, Civil Judge & JMFC at Sandur

Sri. Anjini. M. Advocate,
Sandur Advocate for Plaintiff

ಆಂಧ್ರದಿಂದ ಕಡಲೆಕಾಯಿ ಆಗಮನ | ತಮಿಳುನಾಡು ಮಾಳಿಗೆ ಹೂವು ಆವಕ | ಎಳ್ಳು ಬೆಲ್ಲ ದುಬಾರಿ

ಸಂಕ್ರಾಂತಿ ಹಬ್ಬಕ್ಕೆ ಹೂವು, ಹಣ್ಣು ಬೆಲೆ ಏರಿಕೆ

ಈ ಮೊದಲು ಅವರೆಕಾಯಿ, ಕಡಲೆಕಾಯಿ, ಗೆಣಸು, ಹೂವು ಬೆಲೆ ಕಡಿಮೆ ಇತ್ತು. ಹಬ್ಬ ಸಮಿಸುತ್ತಿದ್ದಂತೆ ಪ್ರತಿ ಕಿಲೋಗೆ 20-30 ರು. ಸಹಜವಾಗಿ ಏರಿಕೆಯಾಗಿದೆ, ಎಷ್ಟೇ ದರ ಏರಿಕೆಯಾದರೂ ನಮ್ಮ ಹಿಂದು ಸಂಪ್ರದಾಯದಂತೆ ಹಬ್ಬ ಮಾಡಲೇಕು. **-ಶಿಲ್ಪಾ ಆರ್,** ಗ್ರಾಹಕಿ, ಬೆಂಗಳೂರು

ಆಗಸ್ಟ್ ತಿಂಗಳ ಬಾರೀ ಮಳೆಯಿಂದ ಬೆಳೆ ಇಳುವರಿ ಕುಸಿತ ಕಂಡಿದೆ. ಸರಬರಾಜು ಕಡಿಮೆಯಾಗಿ ಬೆಲೆ ಏರಿಕೆಗೆ ಕಾರಣವಾಗಿದೆ. ಹಾಗಾಗಿ ಈ ಸಂಕ್ರಾಂತಿಗೆ ಗ್ರಾಹಕರು ಕಡಿಮೆ ಪ್ರಮಾಣದಲ್ಲಿ ಖರೀದಿಗೆ ಬರಬಹುದು ಎಂಬ ಆತಂಕ ಕಾಡುತ್ತಿದೆ. **-ಗೋವಿಂದಪ್ಪ,** ವ್ಯಾಪಾರಿ, ಕೆ ಆರ್ ಮಾರುಕಟ್ಟೆ

ಹೂವಪ್ಪ. ಐ. ಹೆಚ್. ಬೆಂಗಳೂರು

ಸುಗ್ಗಿ ಹಬ್ಬ ಸಂಕ್ರಾಂತಿ, ವರ್ಷದ ಮೊದಲನೇ ಹಬ್ಬವೂ ಹೌದು. ಸುಗ್ಗಿ ಹಬ್ಬ ಎಂದೇ ಕರೆಯುವ ಸಂಕ್ರಾಂತಿ ಆಚರಣೆಗೆ ಸಜ್ಜಾಗಿರುವ ಜನರಿಗೆ ಬೆಲೆ ಏರಿಕೆ ಬಿಸಿ ಸರಿಯಾಗಿಯೇ ತಟ್ಟಿದೆ. ಖರೀದಿ ಸಂಭ್ರಮ ಜೋರಾಗಿದೆ. ಬೆಲೆ ಏರಿಕೆ ನಡುವೆಯೂ ನಗರದ ಮಾರುಕಟ್ಟೆಯಲ್ಲಿ ಕಬ್ಬು, ಗೆಣಸು, ಕಡಲೆಕಾಯಿ, ಅವರೇಕಾಯಿ ಮಾರಾಟವು ಭರದಿಂದ ಸಾಗಿದೆ. ಜನರು ಅಳೆದು ತೂಗಿ ಹಬ್ಬದ ಖರೀದಿ ಮಾಡುತ್ತಿದ್ದಾರೆ. ಹೊಸ ವರ್ಷದ ಮೊದಲ ಹಬ್ಬ ಎಂಬ ಕಾರಣಕ್ಕೆ ಅದ್ಧೂರಿ ವ್ಯಾಪಾರ ನಡೆದಿದೆ.

'ಎಳ್ಳು, ಬೆಲ್ಲ ಹಂಚಿ ಒಳ್ಳೆಯ ಮಾತನಾಡು' ಎಂಬ ಉತ್ತಮ ಸಂದೇಶ ಸಾರುವ ಹಬ್ಬಕ್ಕೆ ಶೇಂಗಾ, ಎಳ್ಳು-ಬೆಲ್ಲ, ಹೂವು-ಹಣ್ಣು, ತರಕಾರಿ ಹೀಗೆ ಎಲ್ಲ ಅಗತ್ಯ ವಸ್ತುಗಳ ಏರಿಕೆಯಾಗಿದ್ದು, ಜನರ ಜೇಬಿಗೆ ಕತ್ತರಿ ಬಿದ್ದಿದೆ.

ಬೆಲೆ ದುಬಾರಿ: ಮಾರುಕಟ್ಟೆಯಲ್ಲಿ ಹಬ್ಬಕ್ಕೆ ಬೇಕಾದ ಸರಕುಗಳೆಲ್ಲ ಕಳೆದ ಸಾಲಿಗಿಂತ ಶೇ, 25ರಷ್ಟು ದುಬಾರಿಯಾಗಿವೆ. ಬೆಂಗಳೂರಿನಲ್ಲಿ ಅವರೆಕಾಯಿ ಬೆಲೆ ಸಗಟು ದರ 40-50 ರು.ಇದ್ದು, ಚಿಲ್ಲರೆ ದರ ಪ್ರತಿ ಕೆ.ಜಿ.ಗೆ 70 ರು.ನಿಂದ 80 ರು.ವರೆಗೂ ತಲುಪಿದೆ. ಕಡಲೆಕಾಯಿ ಕೆ.ಜಿಗೆ ಸಗಟು 70-80 ರು. ಚಿಲ್ಲರೆ ದರ 100-110 ರು. ಮಾರಾಟವಾಗುತ್ತಿದೆ. ಕಟಿಂಗ್ ಬೆಲ್ಲ ಕೆ.ಜಿಗೆ ಚಿಲ್ಲರೆ ದರ 90-120 ರು, ಗೆಣಸು 40-60 ರು., ಕಬ್ಬು ಒಂದು ಜಾಲ್ಲಿಗೆ 50-60 ರು. ಅಗತ್ಯ ವಸ್ತುಗಳಾದ ಅಗತ್ಯ ಅಡುಗೆ ಎಣ್ಣೆ ಬೇಳೆ, ಬೇಳೆಕಾಳುಗಳ ಬೆಲೆ ಏರಿಕೆಯಾಗಿದೆ.

ಹೂಗಳ ಬೆಲೆಯೂ ಏರಿಕೆ: ಸೇವಂತಿಗೆ ಹೂವು ಹೊರತುಪಡಿಸಿ ಮಲ್ಲಿಗೆ, ಕಾಕಡ ಸುಗಂಧರಾಜ ಹಿಂದಿನಗಿಂತ ಶೇ.30ರಷ್ಟು ಹೂವು ದರ ಏರಿಕೆಯಾಗಿದೆ, ಹಣ್ಣುಗಳ ಬೆಲೆಯೂ ಏರಿಕೆಯಾಗಿವೆ. ಡಾಲಬ್ರಿ, ಕೆ.ಜಿ.ಗೆ 200-250 ರೂ. ಶೇಬು 220-270 ರು. ದ್ರಾಕ್ಷಿ 220-240 ರು. ಏಲಕ್ಕಿ ಬಾಳೆ ಹಣ್ಣು 70-80 ರು.ಆಗಿದೆ. ಹಣ್ಣು, ಹೂವುಗಳಿಗೆ ಹೋಲಿಸಿದರೆ ತರಕಾರಿ ಬೆಲೆಯಲ್ಲಿ ಹೇಳಿಕೊಳ್ಳುವಂತಹ ಏರಿಕೆಯಾಗಿಲ್ಲ.

ಕ್ಯಾರೆಟ್, ಬೀನ್ಸ್, ನುಗ್ಗೆಕಾಯಿ ಹೊರತುಪಡಿಸಿ ಬೆಂಡೆಕಾಯಿ, ಹೂವು ಕೋಸ್, ಎಲೆಕೋಸ್, ಬದನೇಕಾಯಿ, ಬಿಟ್ರೋಟ್, ಮೂಲಂಗಿ ಸೌತೆಕಾಯಿ, ಹಿರೇಕಾಯಿ, ಬಟಾಣಿಕಾಯಿ 30-60 ರು. ಒಳಗೆ ಮಾರಾಟವಾಗುತ್ತಿದೆ. ಕ್ಯಾರೆಟ್, ಬೀನ್ಸ್, ಗೊರಿಕಾಯಿ 60-80 ರು. ಗೆ ಮಾರಟವಾಗುತ್ತಿದೆ.

ಕೆ.ಆರ್. ಮಾರುಕಟ್ಟೆ ದರ

ಪ್ರತಿ ಕೆ. ಹೂವು	
ಸೇವಂತಿಗೆ	50- 120 ರು.
ಕನಕಾಂಬರ	500- 650 ರು.
ಕಾಕಡ ಮಲ್ಲಿಗೆ	400- 550 ರು.
ಗುಂಡು ಮಲ್ಲಿಗೆ	1,400-2,500 ರು.
ಕಣಗಲ	200-300 ರು.
ಗುಲಾಬಿ	140- 170 ರು.

ಕೆ.ಆರ್. ಮಾರುಕಟ್ಟೆ ದರ

ಪ್ರತಿ ಕೆ.ಜಿ ತರಕಾರಿ	
ನುಗ್ಗೆಕಾಯಿ	300-350 ರು.
ಗ್ರೀನ್ ಬಟಾಣಿ	50-60 ರು.
ಬೀನ್ಸ್	60-70 ರು
ತೊಗರಿಕಾಯಿ	60-70 ರು.
ಕ್ಯಾರೆಟ್	60-80 ರು.
ಬೆಂಡೇಕಾಯಿ	50-60 ರು.
ಟೊಮೆಟೊ	30-40 ರು.

ಸಂಕ್ರಾಂತಿ ವಿಶೇಷ ಪರಿಕರಿಗಳು

ಪ್ರತಿ ಕೆ.ಜಿ.ಗೆ	
ಎಳ್ಳು ಬೆಲ್ಲ ಮಿಶ್ರಿತ	400-450 ರು
ಕಡಲೆಕಾಯಿ	100-120 ರು.
ಅವರೆಕಾಯಿ	70-80 ರು.
ಕಟ್ ಮಾಡಿದ ಬೆಲ್ಲ	100-120 ರು.
ಕಟ್ ಮಾಡಿದ ಕೊಬ್ಬರಿ	350-400 ರು.
ಗೆಣಸು	50-60 ರು.
ಏಲಕ್ಕಿ	70-80 ರು.
ಪಚ್ಚಬಾಳೆ	35-40 ರು.

ಎಳ್ಳು ಬೆಲ್ಲ ಮಿಶ್ರಿತ ಪೊಟ್ಟಣಗಳು ವಿವಿಧ ಗಾತ್ರಗಳಲ್ಲಿ ಲಭ್ಯ ಇವೆ. ಸಣ್ಣ ಪೊಟ್ಟಣದ ಒಂದು ಕೆ.ಜಿ.ಯ ಎಳ್ಳುಬೆಲ್ಲ ಮಿಶ್ರಿತ ಪೊಟ್ಟಣದ ದರ 350ರಿಂದ 450 ರು. ಇದೆ. ಅರ್ಧ ಕೆ.ಜಿ ಸಕ್ಕರೆ ಅಚ್ಚು 150ರಂತೆ ಮಾರಾಟವಾಗುತ್ತಿದೆ.

ಬೆಂಗಳೂರಿನ ಪ್ರಮುಖ ರಸ್ತೆಗಳಲ್ಲಿ ತಾತ್ಕಾಲಿಕ ಅಂಗಡಿ ತೆರೆದಿದ್ದರೂ ನಗರದ ಗಾಂಧಿ ಬಜಾರ್ ಯಶವಂತಪುರ, ಮಲ್ಲೇಶ್ವರಂ ಕೋರಮಂಗಲ ಹಾಗೂ ಕೆ.ಆರ್. ಮಾರುಕಟ್ಟೆಯಲ್ಲಿ ಉತ್ತಮ ವ್ಯಾಪಾರ ನಡೆದಿದೆ. ರಾಶಿ ರಾಶಿ ಕಬ್ಬು, ಅವರೆಕಾಯಿ, ಗೆಣಸನ್ನು ವ್ಯಾಪಾರಿಗಳು ಮಾರಾಟ ಮಾಡುತ್ತಿದ್ದು, ಹಬ್ಬಗಳಲ್ಲಿ ಬೆಳೆ ಏರಿಕೆ ಸಹಜ, ಹೀಗಾಗಿ ಗ್ರಾಹಕರು ಅಳೆದು ತೂಗಿ ಚೌಕಾಸಿ ಮಾಡಿ ಖರೀದಿ ಮಾಡುತ್ತಿದ್ದಾರೆ ಎನ್ನುತ್ತಾರೆ ಮಲ್ಲೇಶ್ವರಂ ವ್ಯಾಪಾರಿ ಸಂತೋಷ್ ಕುಮಾರ.

ನೆಲಗಡಲೆ ಕಬ್ಬು ಬೇಡಿಕೆ: ಸಂಕ್ರಾಂತಿ ಹಬ್ಬಕ್ಕೆ ವಿಶೇಷ ಎಂದರೆ ಕಡಲೆಕಾಯಿ, ಕಬ್ಬು. ಅದರಲ್ಲೂ ಕರಿಕಬ್ಬಿಗೆ ಹೆಚ್ಚಿನ ಪ್ರಾಶಸ್ತ್ಯ ನೀಡಲಾಗಿದೆ. ನಮ್ಮ ರಾಜ್ಯದಲ್ಲಿ ಇದನ್ನು ಹೆಚ್ಚಾಗಿ ಬೆಳೆಯುವುದಿಲ್ಲ. ತಮಿಳುನಾಡಿನಿಂದ ಈ ಕಬ್ಬು ಹೆಚ್ಚಿನ ಪ್ರಮಾಣದಲ್ಲಿ ಸರಬರಾಜಾಗುತ್ತಿದೆ. ಇನ್ನೊಂದೆಡೆ, ನೆಲಗಡಲೆ ನಮ್ಮಲ್ಲಿ ಬೆಳೆದರೂ ಆಂಧ್ರಪ್ರದೇಶದಿಂದ ಹೆಚ್ಚಿನ ಸಂಖ್ಯೆಯಲ್ಲಿ ಬರುತ್ತಿದ್ದು, ಹಬ್ಬದ ಕಾರಣ ಬೆಲೆಯಲ್ಲೂ ಏರಿಕೆಯಾಗಿದೆ ಎಂದು ಹೇಳುತ್ತಾರೆ ಕಡಲೆಕಾಯಿ ವ್ಯಾಪಾರಿ ಸುಂದರ್. ಹಬ್ಬದ ದಿನ ನೆಲಗಡಲೆ ಜೊತೆ ಅವರೇಕಾಯಿಯನ್ನು ಬೇಯಿಸಿ ತಿನ್ನುವುದು ಸಂಪ್ರದಾಯ. ಈಗಲೂ ಈ ನಿಯಮ ಮುಂದುವರಿದಿದೆ.

ಹಳ್ಳಿಗಳಲ್ಲಿ ಹಳೇ ಸೊಗಡಿನಲ್ಲೆ ಹಬ್ಬ: ಈ ಬಾರಿ ಜಿಲ್ಲೆಯಲ್ಲಿ ಉತ್ತಮ ಮಳೆಯಾಗಿತ್ತು. ಹೀಗಾಗಿ ಹೊಸ ವರ್ಷದ ಮೊದಲ ಹಬ್ಬ ಸಂಕ್ರಾಂತಿಯನ್ನು ಭರ್ಜರಿಯಾಗಿ ಆಚರಿಸಲು ಜನರು ಸಿದ್ಧತೆಗಳನ್ನು ನಡೆಸಿದ್ದಾರೆ. ವಿಶೇಷವಾಗಿ ಗ್ರಾಮೀಣ ಪ್ರದೇಶದಲ್ಲಿ ಸಂಕ್ರಾಂತಿ ಹಬ್ಬವನ್ನು ಅದ್ಧೂರಿಯಾಗಿ ಆಚರಿಸುತ್ತಿದ್ದು, ಈಗಲೂ ಕೆಲವು ಗಳು ನಡೆಯುತ್ತಿರುವುದು ವಿಶೇಷ.

34 ಅಕ್ರಮ ಬಾಂಗ್ಲಾ ವಲಸಿಗರು ವಶ

ಬೆಂಗಳೂರು: ಬೆಂಗಳೂರಿನ ಎಲೆಕ್ಟ್ರಾನಿಕ್ ಸಿಟಿ ಉಪವಿಭಾಗದ ಪೊಲೀಸರು ಶಂಕಿತ ಅಕ್ರಮ ಬಾಂಗ್ಲಾ ವಲಸಿಗರ ವಿರುದ್ಧ ಸರಣಿ ಕಾರ್ಯಾಚರಣೆ ನಡೆಸಿ ಒಟ್ಟು 34 ಮಂದಿಯನ್ನು ವಶಕ್ಕೆ ಪಡೆದಿದ್ದಾರೆ. ಖಚಿತ ಮಾಹಿತಿಯ ಆಧಾರದ ಮೇಲೆ ಕಳೆದ ಒಂದು ವಾರದಲ್ಲಿ ವಿವಿಧ ಪೊಲೀಸ್ ಠಾಣಾ ವ್ಯಾಪ್ತಿಗಳಲ್ಲಿ ದಾಳಿ ನಡೆಸಲಾಗಿದೆ. ಪೊಲೀಸರ ಮಾಹಿತಿ ಪ್ರಕಾರ, ಎಲೆಕ್ಟ್ರಾನಿಕ್ ಸಿಟಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಏಳಕ್ಕೂ ಹೆಚ್ಚು, ಹೆಬ್ಬಗೋಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ 16, ಹಾಗೂ ಬೇಗೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ 10 ಮಂದಿ ಶಂಕಿತ ಅಕ್ರಮ ಬಾಂಗ್ಲಾ ವಲಸಿಗರನ್ನು ವಶಕ್ಕೆ ಪಡೆಯಲಾಗಿದೆ.

ವಶಕ್ಕೆ ಪಡೆದವರು ಅಕ್ರಮವಾಗಿ ಬಾಂಗ್ಲಾದೇಶದಿಂದ ಭಾರತಕ್ಕೆ ಪ್ರವೇಶಿಸಿರುವ ಆರೋಪ ಎದುರಿಸುತ್ತಿದ್ದು ನಕಲಿ ಪಾಸ್‌ಪೋರ್ಟ್, ಆಧಾರ್ ಕಾರ್ಡ್ ಸೇರಿದಂತೆ ವಿವಿಧ ದಾಖಲೆಗಳನ್ನು ಸೃಷ್ಟಿಸಿಕೊಂಡು ಇಲ್ಲಿಗೆ ಬಂದಿರುವ ಶಂಕೆ ವ್ಯಕ್ತವಾಗಿದೆ. ಹೆಚ್ಚಿನವರು ಗುಜರಿ ಗೋದಾಮುಗಳ ಶೆಡ್‌ಗಳಲ್ಲಿ ವಾಸವಿದ್ದು, ಕೆಲವರು ಅಪಾರ್ಟ್‌ಮೆಂಟ್‌ಗಳಲ್ಲಿ ಕೆಲಸ ಮಾಡುತ್ತಿದ್ದರು. ಇನ್ನೂ ಕೆಲವರು ರಾತ್ರಿ ಸಮಯದಲ್ಲಿ ಚಿಂದಿ ಆಯುವ ಕೆಲಸ ಮಾಡುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಕಾರ್ಯಾಚರಣೆ ವೇಳೆ ವಶಕ್ಕೆ ಪಡೆದ ಎಲ್ಲ ಶಂಕಿತರನ್ನು ದಾಖಲೆಗಳ ಪರಿಶೀಲನೆಗಾಗಿ ಎಫ್‌ಆರ್‌ಆರ್‌ಒ ಮುಂದೆ ಹಾಜರುಪಡಿಸಲಾಗಿದ್ದು, ಮುಂದಿನ ಕಾನೂನು ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಎಲೆಕ್ಟ್ರಾನಿಕ್ ಸಿಟಿ ಉಪವಿಭಾಗದ ಪೊಲೀಸರು ತಿಳಿಸಿದ್ದಾರೆ. ಬೆಂಗಳೂರು ನಗರ ಜಿಲ್ಲೆ ಆನೇಕಲ್ ತಾಲೂಕಿನ ಹಾರಗದ್ದೆ ಗ್ರಾಮದಲ್ಲಿ ವೀಸಾ ಅವಧಿ ಮುಗಿದಿದ್ದರೂ ಅಕ್ರಮವಾಗಿ ನೆಲೆಸಿದ್ದ ಇಬ್ಬರು ನೈಜೀರಿಯಾ ಪ್ರಜೆಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ವಶಕ್ಕೆ ಪಡೆಯಲಾದವರನ್ನು ಡೊವ್ಯಾರೋ(34) ಹಾಗೂ ಮಾನ್ಯುಯಲ್ ನಾಜುಬಿ (32) ಎಂದು ಗುರುತಿಸಲಾಗಿದೆ.

35 ಲಕ್ಷ ಹಣ ವಂಚನೆ

ಬೆಂಗಳೂರು: ಅಪರಿಚಿತ ಮಹಿಳೆಯೊಬ್ಬರು ಖಾಸಗಿ ಕಂಪನಿಯ ಉದ್ಯೋಗಿಯೋರ್ವರಿಗೆ ಕರೆ ಮಾಡಿ ಸೆಬಿ ಕಂಪನಿಯಿಂದ ಹಣಕಾಸು ವಿಭಾಗದ ಅಧಿಕಾರಿ ಎಂದು ಪರಿಚಯಿಸಿಕೊಂಡು ಹೂಡಿಕೆ ನೆಪದಲ್ಲಿ ಸುಮಾರು 35 ಲಕ್ಷ ಹಣ ವಂಚಿಸಿದ್ದಾಳೆ. ಈ ಸಂಬಂಧ ಬೇಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಆಂಧ್ರಪ್ರದೇಶ ಮೂಲದ ಸತೀಶ್ ಹಣ ಕಳೆದುಕೊಂಡವರು. ಇವರು ಖಾಸಗಿ ಕಂಪೆನಿಯೊಂದರಲ್ಲಿ ಮ್ಯಾನೇಜರ್ ಆಗಿ ಕೆಲಸ ಮಾಡುತ್ತಿದ್ದಾರೆ. ಸೆಬಿ ಕಂಪನಿಯಿಂದ ಕರೆ ಮಾಡುತ್ತಿರುವುದಾಗಿ ತಿಳಿಸಿದ ಖದೀಮರು, ಷೇರು ಮಾರುಕಟ್ಟೆಯಲ್ಲಿ ಹಣ ಹೂಡಿಕೆ ಮಾಡಿದ್ದರೆ ಹೆಚ್ಚು ಲಾಭಾಂಶ ಬರಲಿದೆ ಎಂದು ನಂಬಿಸಿದ್ದರು. ಆರಂಭದಲ್ಲಿ ಡಿಮ್ಯಾಟ್ ಖಾತೆಯಿಂದ 2.5 ಲಕ್ಷ ಹೂಡಿಕೆ ಮಾಡಿಸಿಕೊಂಡಿದ್ದರು. 2ನೇ ಬಾರಿ ದೂರುದಾರರಿಗೆ ಕರೆ ಮಾಡಿ ನಿಮ್ಮ ಡಿಮ್ಯಾಟ್ ಖಾತೆಯನ್ನು ನಾವೇ ನಿರ್ವಹಣೆ ಮಾಡುತ್ತೇವೆ, ಹಣ ನೀಡಿದರೆ ಹೆಚ್ಚಿನ ಪ್ರಮಾಣದಲ್ಲಿ ಲಾಭ ಮಾಡಿ ಹಣ ಕೊಡಲಾಗುವುದು ಎಂದು ವಂಚಕರು ಹೇಳಿದ್ದರು. ಇದನ್ನು ನಂಬಿದ ಸತೀಶ್ 20 ಲಕ್ಷ ಹಣ ವರ್ಗಾವಣೆ ಮಾಡಿದ್ದರು. ಹಲವು ತಿಂಗಳು ಕಳೆದರೂ ಲಾಭಾಂಶದ ಹಣ ನೀಡಿರಲಿಲ್ಲ. ಇದನ್ನು ಪ್ರಶ್ನಿಸಿದಾಗ ಆರೋಪಿಗಳು ಹೊಸ ವರಸೆ ತೆಗೆದಿದ್ದರು. ಈ ಬಾರಿ ಹಣವನ್ನು ನಾನು ಹೇಳಿದ ಬ್ಯಾಂಕ್ ಖಾತೆಗಳಿಗೆ ನೇರವಾಗಿ ವರ್ಗಾವಣೆ ಮಾಡಿ. ನಾವು ನಮ್ಮ ಡಿಮ್ಯಾಟ್ ಖಾತೆಗಳಿಂದ ಷೇರು ಮಾರ್ಕೆಟ್‌ನಲ್ಲಿ ಹಣ ಹೂಡಿ ದುಪ್ಪಟ್ಟು ಹಣ ಬರುವಂತೆ ನೋಡಿಕೊಳ್ಳುತ್ತೇವೆ ಎಂದು ಹೇಳಿದ್ದರು. ಮತ್ತೆ ವಂಚಕರ ಮಾತು ನಂಬಿದ ದೂರುದಾರರು ಒಟ್ಟು ಸುಮಾರು 35 ಲಕ್ಷ ಹಣ ಹೂಡಿಕೆ ಮಾಡಿದರೂ ಆರೋಪಿಗಳು ಹಣ ವರ್ಗಾಯಿಸಿಕೊಂಡು ವಂಚಿಸಿದ್ದಾರೆ ಎಂದು ದೂರಿನಲ್ಲಿ ಸತೀಶ್ ಆರೋಪಿಸಿದ್ದಾರೆ. ಸದ್ಯ ಪ್ರಕರಣ ದಾಖಲಿಸಿಕೊಂಡು ವಂಚಕರ ಪತ್ತೆಗೆ ಕ್ರಮ ಕೈಗೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ರಾಷ್ಟ್ರಮಟ್ಟದ ವಿವೇಕ ದೀಪ್ತಿ 29ರಿಂದ

ಬೆಂಗಳೂರು: ಅಧ್ಯಯನ ಮತ್ತು ಸಂಶೋಧನೆಗೆ ಸಮರ್ಪಿತ ವೇದಾಂತ ಭಾರತಿ ವಿವೇಕ ದೀಪ್ತಿ ಎಂಬ ರಾಷ್ಟ್ರಮಟ್ಟದ, ಅನುಸಂಧಾನಾಧಾರಿತ ಶೈಕ್ಷಣಿಕ ಕಾರ್ಯಕ್ರಮ ಜ.29ರಿಂದ ಫೆ. 1ರವರೆಗೆ ನಗರದ ಅರಮನೆ ಮೈದಾನದಲ್ಲಿ ಆಯೋಜಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ. ಭಾರತದ ಜ್ಞಾನ ಪರಂಪರೆಯ ಆಧಾರದ ಮೇಲೆ ಅನುಭವಾತ್ಮಕ ಕಲಿಕೆ, ವೈಜ್ಞಾನಿಕ ಅನ್ವೇಷಣೆ ಹಾಗೂ ಸಮೂಹ ಚಿಂತನೆಗಳನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ. ನಾಲ್ಕು ದಿನಗಳ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳ ನೇತೃತ್ವದ ಅನುಭವಾತ್ಮಕ ಪ್ರದರ್ಶನವಾದ ದಕ್ಷಿಣಾಸ್ಯ ದರ್ಶಿನಿ ಹಾಗೂ ಮೂರನೇ ದಿನ ನಡೆಯುವ ಸಮೂಹ ಮಹಾಸಮರ್ಪಣೆ ಪ್ರಮುಖ ಆಕರ್ಷಣೆಯಾಗಿದೆ. ಜ. 31 ರಂದು ನಡೆಯುವ ದಕ್ಷಿಣಾಮೂರ್ತಿ ಅಷ್ಟಕ - ಸ್ತೋತ್ರ ಮಹಾಸಮರ್ಪಣೆ ಕಾರ್ಯಕ್ರಮದಲ್ಲಿ ಶೃಂಗೇರಿ ಶಾರದಾ ಮಠದ ಭಾರತಿ ತೀರ್ಥ ಸ್ವಾಮೀಜಿ, ಉತ್ತರಾಧಿಕಾರಿ ವಿಧುಶೇಖರ ಭಾರತಿ ಸ್ವಾಮೀಜಿ, ಯಡತೊರೆ ಮಠದ ಡಾ. ಶಂಕರ ಭಾರತಿ ಸ್ವಾಮೀಜಿ, ಉತ್ತರಾಧಿಕಾರಿ ಬ್ರಹ್ಮಾನಂದ ಭಾರತಿ ಸ್ವಾಮೀಜಿ ಉಪಸ್ಥಿತರಿರಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಿಗ್‌ಬಾಸ್ ಗಿಲ್ಲಿ ಪರ ಮಂಡ್ಯ ರಾಜಕಾರಣಿಗಳು

ಬೆಂಗಳೂರು: ಬಿಗ್ ಬಾಸ್ ಕನ್ನಡ ಸೀಸನ್ 12ರಲ್ಲಿ ಗಿಲ್ಲಿ ನಟ ಅವರು ತಮ್ಮ ಕ್ರೇಜ್‌ನಿಂದ ಎಲ್ಲರ ಗಮನ ಸೆಳೆದಿದ್ದಾರೆ. ಈಗಾಗಲೇ ಫಿನಾಲೆ ತಲುಪಿರುವ ಗಿಲ್ಲಿ ನಟ ಈ ಬಾರಿ ಟ್ರೋಫಿಯನ್ನು ಎತ್ತುವ ಸಾಧ್ಯತೆಗಳು ಜಾಸ್ತಿಯೇ ಇವೆ. ಸೋಶಿಯ್ ಮೀಡಿಯಾದಲ್ಲಿ ಅವರ ಪರವಾದ ದೊಡ್ಡ ಅಲೆ ಇದೆ, ಈ ನಡುವೆ ಮಂಡ್ಯದ ಕೆಲ ರಾಜ ಕಾರಣಿಗಳು ಕೂಡ ಗಿಲ್ಲಿ ಪರವಾಗಿ ಧ್ವನಿ ಎತ್ತಿದ್ದಾರೆ

ಶಾಸಕ ಸ್ವಾಮಿ ಹೇಳಿಕೆ: ನಾಡಿನ ಸಮಸ್ತ ಜನತೆಗೆ ನಮಸ್ಕಾರ.. ಮಳವಳ್ಳಿಯ ಹೆಮ್ಮೆಯ ನಟರಾಜ್, ಗಿಲ್ಲಿ ನಟ ಬಿಗ್ ಬಾಸ್ ಸ್ಪರ್ಧೆಯಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿ, ಅಂತಿಮ ಘಟ್ಟಕ್ಕೆ ಬಂದಿರುವ ಸಂದರ್ಭದಲ್ಲಿ, ಆತನ ಕಲೆ ಮತ್ತು ಆತನ ಪ್ರಾಮಾಣಿಕ ಪ್ರಯತ್ನವನ್ನು ಸರ್ವರೂ ಬೆಂಬಲಿಸ ಬೇಕು. ನಮ್ಮ ಮಳವಳ್ಳಿಯ ಹೊಸ ಪ್ರತಿಭೆಯನ್ನು ಸೃಷ್ಟಿಯಾಗಲು ಆಶೀರ್ವಾದ ಮಾಡಿ. ಗಿಲ್ಲಿ ನಟನನ್ನು ಬೆಂಬಲಿಸಿ, ಆತನಿಗೆ ಅತೀ ಹೆಚ್ಚಿನ ಮತಗಳನ್ನು ನೀಡಿ ಎಂದು ಮಳವಳ್ಳಿಯ ಶಾಸಕ ನರೇಂದ್ರ ಸ್ವಾಮಿ ಮನವಿ ಮಾಡಿಕೊಂಡಿದ್ದಾರೆ. ಉತ್ತಮತನಕ್ಕೇ ಅಂತಿಮ ಗೆಲುವು' 'ಗಿಲ್ಲಿ ನಟ ಅವರು ಕಾರ್ಯ ಕ್ರಮಕ್ಕೆ ಕಾಲಿಟ್ಟ ದಿನದಿಂದಲೂ ತಮ್ಮದೇ ಆದ ಗುರುತು ಮೂಡಿಸಿದ್ದು, ಕೃತಕ ಮತ್ತು ಆರ್ಭಟದ ಆಟವನ್ನು ಬಿಟ್ಟು ನೈಜತೆ, ಮಾನವೀಯತೆ ಮತ್ತು ಸಮತೋಲನದಿಂದ ನಡೆದುಕೊಂಡಿದ್ದಾರೆ, ಅವರ ಗೆಲುವು ಕೇವಲ ಒಂದು ಪ್ರಶಸ್ತಿ ಅಲ್ಲ, ಅದು ಲಕ್ಷಾಂತರ ಜನಗಳ ಧ್ವನಿ. ಅವರ ಮೇಲೆ ಇರುವ ನಂಬಿಕೆ, ಭರವಸೆ, ಮತ್ತು ಉತ್ತಮತನವೇ ಅಂತಿಮ ಗೆಲುವು ಎಂಬ ಸಂದೇಶಕ್ಕೆ ಮುದ್ರೆಯಾಗಲಿ. ಈ ಸೀಸನ್‌ನ ಟ್ರೋಫಿಗೆ ಅವರು ಅತ್ಯಂತ ಯೋಗ್ಯ ಸ್ಪರ್ಧಿ ಎಂದು ಭಾವಿಸುತ್ತಾ ಶುಭವಾಗಲಿ' ಎಂದು ಹಾರೈಸುತ್ತೇನೆ ಎಂದು ಡಿ.ಸಿ. ತಮ್ಮಣ್ಣ ಹೇಳಿದ್ದಾರೆ.

ಮಾರಕಾಸ್ತ್ರಗಳಿಂದ ಗುಜರಿ ವ್ಯಾಪಾರಿ ಕೊಲೆ

ಬೆಂಗಳೂರು: ಗುಜರಿ ವ್ಯಾಪಾರಿಯನ್ನು ಆಟೋದಿಂದ ಹೊರಗೆಳೆದ ಗುಂಪೊಂದು ಮಾರಕಾಸ್ತ್ರಗಳಿಂದ ಹಲ್ಲೆನಡೆಸಿ ಕೊಲೆ ಮಾಡಿ ಪರಾರಿಯಾಗಿರುವ ಘಟನೆ ಬಂಡೆಪಾಳ್ಯ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ರಾತ್ರಿ ನಡೆದಿದೆ. ಸಬೀರ್ (29) ಕೊಲೆಯಾದ ಯುವಕ. ಈತ ನಿವೃತ್ತ ಎಎಸ್‌ಐ ಪುತ್ರ ಎಂದು ತಿಳಿದು ಬಂದಿದ್ದು, ಹೊಸರೋಡ್‌ನಲ್ಲಿ ಗುಜರಿ ವ್ಯಾಪಾರ ಮಾಡಿಕೊಂಡು ವಾಸವಾಗಿದ್ದರು. ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಸಂಬಂಧಿಯೊಬ್ಬರು ಚಿಕಿತ್ಸೆಗೆ ದಾಖಲಾಗಿದ್ದರಿಂದ ಅವರನ್ನು ನೋಡಿಕೊಂಡು ಸಬೀರ್ ರಾತ್ರಿ 10.45 ರ ಸುಮಾರಿನಲ್ಲಿ ಸ್ನೇಹಿತರ ಜೊತೆ ಆಟೋದಲ್ಲಿ ಮನೆಗೆ ಹಿಂದಿರುಗುತ್ತಿದ್ದರು.ಅದೇ ಸಮಯಕ್ಕಾಗಿ ಕಾಯುತ್ತಿದ್ದ ಎಂಟತ್ತು ಮಂದಿ ದುಷ್ಕರ್ಮಿಗಳು ಆಟೋ ಹಾಗೂ ಬೈಕ್‌ಗಳಲ್ಲಿ ಹಿಂಬಾಲಿಸಿಕೊಂಡು ಬಂದು ಮಂಗಮನಪಾಳ್ಯದ ಪೆಟ್ರೋಲ್ ಬಂಕ್ ಬಳಿ ಆಟೋ ಅಡ್ಡಗಟ್ಟಿ ಸಬೀರ್‌ನನ್ನು ಹೊರಗೆಳೆದುಕೊಂಡು ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿ ಕೊಲೆ ಮಾಡಿ ಪರಾರಿಯಾಗಿದ್ದಾರೆ.

ವಿವೇಕಾನಂದರ ಆದರ್ಶ ಯುವ ಸಮೂಹಕ್ಕೆ ಮಾದರಿ: ಕೇಶವ ಪ್ರಸಾದ್

ಬೆಂಗಳೂರು: ಕರ್ನಾಟಕ ಆರ್ಟ್ಸ್ ಫೌಂಡೇಶನ್ ಆಯೋಜಿಸಿದ್ದ 163ನೇ ವಿವೇಕಾನಂದ ಜಯಂತೋತ್ಸವ ಕಾರ್ಯಕ್ರಮವನ್ನು ಬೆಂಗಳೂರು ನಗರ ಕೆಂಗೇರಿ ಉಪನಗರದ ರಾಮಕೃಷ್ಣ ಶಾಲೆಯಲ್ಲಿ ಸೋಮವಾರ ಸಂಜೆ ವಿಶೇಷ ಉಪನ್ಯಾಸ ಹಾಗೂ ಸಾಧಕರಿಗೆ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಪರಿಷತ್ ಸದಸ್ಯ ಕೇಶವ ಪ್ರಸಾದ್ ರವರು ಸ್ವಾಮಿ ವಿವೇಕಾನಂದವರು ಬಾಲ್ಯ ಜೀವನದ ಘಟನೆಗಳು ತಿಳಿಸುತ್ತಾ ಇವರ ಆದರ್ಶ, ಬೋಧನೆಗಳು ಯುವ ಸಮೂಹಕ್ಕೆ ಮಾದರಿ ಇದ್ದಂತೆ ಎಂದರು. ಎಂದಿಗೂ ಕೂಡ ಅವರ ನಡೆ-ನುಡಿ, ಜೀವನದ ಪ್ರಸಂಗಗಳು ದಂತಕಥೆಗಳಾಗಿ ಬೆಳಗುತ್ತಿವೆ ಎಂದು ತಿಳಿಸಿದರು. ವಿವೇಕಾನಂದರು ಆಯ್ಕೆ ಮಾಡಿಕೊಂಡಿದ್ದು, ಆರ್ಯ ಸಮಾಜದ ಅನುಯಾಯಿಗಳಾಗಿ, ಶ್ರೀ ರಾಮಕೃಷ್ಣ ಪರಮಹಂಸರವರ ಗುರುಗಳಾಗಿದ್ದರು. ಇವರು ಸರಳವಾಗಿ ಇದ್ದುಕೊಂಡು ಸನಾತನ ಧರ್ಮವನ್ನು ಪ್ರಪಂಚದ ಭೂಪಟದಲ್ಲಿ ಎಲ್ಲರೂ ನೋಡುವಂತೆ ಮಾಡಿದ್ದು ಇತಿಹಾಸವಾಗಿದೆ. ಅಂದಿನ ವಿವೇಕಾನಂದರು ಕರ್ನಾಟಕಕ್ಕೆ ಬಂದಾಗ ಮೈಸೂರು ಸಂಸ್ಥಾನದ ಮಹಾರಾಜರ ಬಳಿ ಬಂದಾಗ, ನಂತರದಲ್ಲಿ ಬೆಂಗಳೂರಿನ ಕಾಡು ಮಲ್ಲೇಶ್ವರ ದೇವಸ್ಥಾನ, ಬೆಳಗಾವಿ ಸಹ ಬಂದಿದ್ದು ಇದೊಂದು ರಾಜ್ಯದ ಅಜರಾಮರ ಎಂದರು.

ವಿಧಾನ ಪರಿಷತ್ ಸದಸ್ಯ ಕೇಶವ ಪ್ರಸಾದ್, ಕಸಾಪ ಯಶವಂತಪುರ ವಿಧಾನಸಭಾ ಕ್ಷೇತ್ರದ ಅಧ್ಯಕ್ಷ ಸುಧೀಂದ್ರ, ಕುಮಾರ್, ಅಂತಾರಾಷ್ಟ್ರೀಯ ಜನಪದ ಕಲಾವಿದ ಅಪ್ಪಗೆರೆ ತಿಮ್ಮರಾಜು ಸೇರಿ ಅನೇಕರಿದ್ದರು.

ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ, ಬೆಂಗಳೂರು ಪೂರ್ವ ತಾಲ್ಲೂಕು ಪಂಚಾಯಿತಿ,
ಬೆಂಗಳೂರು ನಗರ ಜಿಲ್ಲೆ

ಹಾಲನಾಯಕನಹಳ್ಳಿ ಗ್ರಾಮ ಪಂಚಾಯಿತಿ

ಟೆಂಡರ್ ಪ್ರಕಟಣೆ ಸಂಖ್ಯೆ: ಹಾ.ನಾ.ಗ್ರಾ.ಪಂ.ಟೆಂ.ಪ್ರ.ಸಂ: 01/2025-26 ದಿನಾಂಕ: 13/01/2026

ಟೆಂಡರ್ ಪ್ರಕಟಣೆ

ಹಾಲನಾಯಕನಹಳ್ಳಿ ಗ್ರಾಮ ಪಂಚಾಯಿತಿ ಕಾರ್ಯಾಲಯ, ಹಾಲನಾಯಕನಹಳ್ಳಿ, ಬೆಂಗಳೂರು ಪೂರ್ವ ತಾಲ್ಲೂಕು ಇವರು ವರ್ಗ-1ರ ನಿಧಿಗೆ ಸಂಬಂಧಿಸಿದಂತೆ ಕ್ರ.ಸಂ.01 ಕ್ಕೆ ಸಂಬಂಧಿಸಿದಂತೆ ಅಧಿಕೃತ ಪರವಾನಿಗೆ ಪಡೆದ ಚಾಲನಾ ತರಬೇತಿ ಸಂಸ್ಥೆಯಿಂದ ಈ ಕೆಳಕಂಡ ವಿಷಯದ ಬಗ್ಗೆ ಟೆಂಡರ್ ಅನ್ನು ಆಹ್ವಾನಿಸಲಾಗಿದೆ.

ಕ್ರ.ಸಂ.	ವಿವರಗಳು	ಇ.ಎಂ.ಡಿ ಮೊತ್ತ	ಖಾಲಿ ಟೆಂಡರ್ ಫಾರಂ ಬೆಲೆ
01	ಶೇ.5 ಮಹಿಳಾ ಸಬಲೀಕರಣದಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಹಿಳೆಯರಿಗೆ ಲಘುವಾಹನ (ನಾಲ್ಕು ಚಕ್ರದ ಕಾರು) ತರಬೇತಿ ನೀಡಿ ಚಾಲನಾ ಪರವಾನಿಗೆ ವಿತರಿಸುವುದು	ರೂ.10,000=0	ರೂ. 500=00

1. ಟೆಂಡರ್ ಫಾರಂ ವಿತರಣೆ : 14/01/2026 ರಿಂದ 16/01/2026
2. ಭರ್ತಿ ಮಾಡಿದ ಟೆಂಡರ್ ಸ್ವೀಕರಿಸುವ ಅಂತಿಮ ದಿನಾಂಕ: 19/01/2026 ಮಧ್ಯಾಹ್ನ 2.00 ಗಂಟೆಯವರೆಗೆ
3. ಟೆಂಡರ್ಗಳನ್ನು ತೆರೆಯುವ ದಿನಾಂಕ: 19/01/2026 ಮಧ್ಯಾಹ್ನ 3.00 ಗಂಟೆಗೆ
4. ಹೆಚ್ಚಿನ ಮಾಹಿತಿಗೆ ಹಾಲನಾಯಕನಹಳ್ಳಿ ಗ್ರಾಮ ಪಂಚಾಯಿತಿ ಕಾರ್ಯಾಲಯವನ್ನು ಸಂಪರ್ಕಿಸುವುದು.
5. ಮೇಲ್ಕಂಡ ಟೆಂಡರನ್ನು ಅಂಗೀಕರಿಸುವ / ತಿರಸ್ಕರಿಸುವ / ಮಾರ್ಪಡಿಸುವ ಹಾಗೂ ಯಾವುದೇ ಹಂತದಲ್ಲಿ ರದ್ದುಪಡಿಸುವ ಅಧಿಕಾರವನ್ನು ಈ ಕೆಳಗೆ ಸಹಿ ಮಾಡಿರುವವರು ಕಾಯ್ದಿರಿಸಿಕೊಂಡಿರುತ್ತಾರೆ.

ಸಹಿ/-
ಅಧ್ಯಕ್ಷರು
ಹಾಲನಾಯಕನಹಳ್ಳಿ ಗ್ರಾಮ ಪಂಚಾಯಿತಿ
ಬೆಂಗಳೂರು ಪೂರ್ವ ತಾಲ್ಲೂಕು, ಬೆಂ.ನ.ಜಿಲ್ಲೆ

ಸಹಿ/-
ಪಂಚಾಯಿತಿ ಅಭಿವೃದ್ಧಿ ಅಧಿಕಾರಿ,
ಹಾಲನಾಯಕನಹಳ್ಳಿ ಗ್ರಾಮ ಪಂಚಾಯಿತಿ
ಬೆಂಗಳೂರು ಪೂರ್ವ ತಾಲ್ಲೂಕು, ಬೆಂ.ನ.ಜಿಲ್ಲೆ

ಅರ್ಥಧಾರಿಗಳಿಗೆ ಅವಹೇಳನ: ಕ್ಷಮೆಯಾಚನೆಗೆ ಆಗ್ರಹ

ಉಡುಪಿ: ನಾಡಿನ ಶ್ರೇಷ್ಠ ಕಲೆಯಾಗಿರುವ ತಾಳಮದ್ದಳೆ ಹಾಗೂ ಅರ್ಥಧಾರಿಗಳ ಬಗ್ಗೆ ಅವಹೇಳನಕಾರಿ ಬರಹಗಳನ್ನು ಪ್ರಕಟಿಸಿರುವ ವಿಶ್ವವಾಣಿ ಪತ್ರಿಕೆ ಪ್ರಧಾನ ಸಂಪಾದಕರಾದ ವಿಶ್ವೇಶ್ವರ ಭಟ್ ಅವರು ಸಾರ್ವಜನಿಕವಾಗಿ ಕ್ಷಮೆ ಯಾಚಿಸಬೇಕು ಎಂದು ತಾಳ ಮದ್ದಳೆ ಕಲಾವಿದರು ಆಗ್ರಹಿಸಿದ್ದಾರೆ.

ಉಡುಪಿಯ ಯಕ್ಷಗಾನ ಕಲಾರಂಗದಲ್ಲಿ ಮಂಗಳವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ತಾಳಮದ್ದಳೆ ಕಲಾವಿದರು, ವಿಶ್ವೇಶ್ವರ ಭಟ್ ಅವರು ತಮ್ಮ ಪತ್ರಿಕೆಯ 'ಭಟ್ಟರ್ ಸ್ಕಾಚ್' ಪ್ರಶೋತ್ತರ ಅಂಕಣದಲ್ಲಿ ಯಕ್ಷಗಾನ ವಿದ್ವಾಂಸ, ಖ್ಯಾತ ಅರ್ಥಧಾರಿ ಡಾ. ಎಂ. ಪ್ರಭಾಕರ ಜೋಶಿ ವಿರುದ್ಧ ತಾಳಮದ್ದಳೆ ಅರ್ಥಧಾರಿಗಳ ಕುರಿತು ನಿರಂತರವಾಗಿ ಅಸಂಬದ್ಧ, ಅವಮಾನಕಾರಿ ಬರಹಗಳನ್ನು ಬರೆಯುತ್ತಿದ್ದಾರೆ ಎಂದವರು ಅಸಮಾಧಾನ ಹೊರ ಹಾಕಿದರು. ನಾವು ಅರ್ಥಧಾರಿಗಳೆಂಬ ಕಾರಣಕ್ಕೆ ನಮ್ಮ ಬಗ್ಗೆ ಏನು ಹೇಳಿದರೂ ಅದು ವಿಮರ್ಶೆ ಎಂಬ ಹೆಸರಿನಲ್ಲಿ ಸಹಿಸಲೇಬೇಕು ಎಂಬ ತಾತ್ಸಾರ ಧೋರಣೆ ಸಮಾಜದಲ್ಲಿ ಮೂಡಬಾರದು. ಪತ್ರಕರ್ತರಾದ ವಿಶ್ವೇಶ್ವರ ಭಟ್ಟರು ಪತ್ರಿಕಾ ಧರ್ಮವನ್ನು ಮೀರಿದ ರೀತಿಯಲ್ಲಿ ವರ್ತಿಸುತ್ತಿದ್ದಾರೆ ಎಂದು ದೂರಿದರು.

ಡಾ.ಎಂ.ಪ್ರಭಾಕರ ಜೋಶಿ ಮಾತನಾಡಿ, ಕಲೆ ಮತ್ತು ಕಲಾವಿದರ ಕುರಿತಾದ ಸಭ್ಯ ವಿಮರ್ಶೆಗೆ ನಾವು ಸದಾ ತೆರೆದ ಮನಸ್ಸಿನಿಂದ ಸಿದ್ಧರಿದ್ದೇವೆ. ಆದರೆ, ವಿಮರ್ಶೆಯ ಹೆಸರಿನಲ್ಲಿ ಕಲಾವಿದರ ತೇಜೋವಧೆ ಮಾಡುವುದು ಪತ್ರಿಕಾಧರ್ಮಕ್ಕೆ ವಿರುದ್ಧ. ತಾಳಮದ್ದಳೆಯಂತಹ ಶ್ರೇಷ್ಠ ಕಲೆಯನ್ನು ಅರಿಯದೇ ಅವಹೇಳನ ಮಾಡುವುದು ನೋವಿನ ಸಂಗತಿ ಎಂದರು.

ಸುದ್ದಿಗೋಷ್ಠಿಯಲ್ಲಿ ಕಲಾವಿದರಾದ ಸರ್ಪಂಗಳ ಈಶ್ವರ ಭಟ್, ಗಣೇಶ್ ಶೆಟ್ಟಿ ಕನ್ನಡಿಕಟ್ಟೆ, ವಿದ್ವಾನ್ ಉಮಾಕಾಂತ ಭಟ್, ಹಿರಣ್ಯ ವೆಂಕಟೇಶ ಭಟ್, ಸುಣ್ಣಂಬಳ ವಿಶ್ವೇಶ್ವರ ಭಟ್, ಅಶೋಕ್ ಭಟ್ ಉಜಿರೆ, ರಾಧಾಕೃಷ್ಣ ಕಲ್ಚಾರ್, ಜಯಪ್ರಕಾಶ್ ಶೆಟ್ಟಿ ಪೆರ್ಮುದೆ, ಹರೀಶ್ ಬಳಂತಿಮುಗರು, ವಾಸುದೇವ ರಂಗಾ ಭಟ್, ಡಾ.ಪ್ರದೀಪ್ ಸಾಮಗ, ಪವನ್ ಕಿರಣ್ಕೆರೆ, ದಿನೇಶ್ ಶೆಟ್ಟಿ ಕಾವಳಕಟ್ಟೆ, ಕಲಾರಂಗದ ಗಂಗಾಧರ ರಾವ್, ಮುರಳಿ ಕಡೆಕಾರ್, ನಾರಾಯಣ ಹೆಗ್ಡೆ ಇದ್ದರು.

ಖತರ್ನಾಕ್ ದರೋಡೆ ಗ್ಯಾಂಗ್ ಲಾಕ್

ಬೆಂಗಳೂರು: 30ಕ್ಕೂ ಹೆಚ್ಚು ರಾಬರಿ ಮಾಡಿದ್ದ ಗ್ಯಾಂಗ್‌ನ ಖೆಡ್ಡಾಕ್ಕೆ ಕೆಡವುವಲ್ಲಿ ಕೆಂಗೇರಿ ಪೊಲೀಸರು ಯಶಸ್ವಿಯಾಗಿದ್ದಾರೆ.

ಹೊಸ ವರ್ಷದ ಹಿಂದಿನ ದಿನ ವ್ಯಕ್ತಿಯೋರ್ವನನ್ನು ಅಡ್ಡಗಟ್ಟಿದ್ದ ಒಂದು ಲಕ್ಷ ರುಪಾಯಿ ದರೋಡೆ ಮಾಡಿತ್ತು. ಪ್ರಕರಣ ಸಂಬಂಧ ಮೂವರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದು, ಆರೋಪಿಗಳು ಈ ಹಿಂದೆ ಇಂತಹುದೇ ಪ್ರಕರಣಗಳಲ್ಲಿ ಭಾಗಿಯಾಗಿ ಜೈಲು ಸೇರಿದ್ದರು ಎಂಬುದು ಕೂಡ ತನಿಖೆ ವೇಳೆ ಬಯಲಾಗಿದೆ. ಬಂಧಿತ ಆರೋಪಿಗಳಾದ ಸುರೇಶ್ ಅಲಿಯಾಸ್ ಸೂರಿ, ಶಶಿಕುಮಾರ್ ಮತ್ತು ಅಕಿಲ್ ಅಲಿಯಾಸ್ ಕೋಜ ಚಿಕ್ಕ ವಯಸ್ಸಿನಲ್ಲಿಯೇ ದರೋಡೆ ನಡೆಸಲು ಆರಂಭಿಸಿದ್ದರು. ಹಣ ನೀಡದಿದ್ರೆ ಚಾಕು, ಚೂರಿಯಿಂದ ಹಲ್ಲೆ ನಡೆಸಿ ಗ್ಯಾಂಗ್ ಎಸ್ಕೇಪ್ ಆಗುತ್ತಿತ್ತು. ನಗರದ ಹೊರವಲಯಗಳಲ್ಲಿ ರಾತ್ರಿ ವೇಳೆ ರಾಬರಿ ಮಾಡುತ್ತಿದ್ದ ಆರೋಪಿಗಳು, ಹಲವರನ್ನು ಬೆದರಿಸಿ ಸುಲಿಗೆ ಮಾಡಿದ್ದರು. ಕಳೆದ ಸೆಪ್ಟೆಂಬರ್‌ನಲ್ಲಿ ಬ್ಯಾಡರಹಳ್ಳಿ ಪೊಲೀಸರು ಆರೋಪಿಗಳನ್ನು ಬಂಧಿಸಿದ್ದು, ಬಾಲ ಕಾರಾಗೃಹಕ್ಕೆ ಕಳುಹಿಸಿದ್ದರು. ಜೈಲಿಗೆ ಹೋಗಿ ಬಂದರೂ ಬುದ್ಧಿ ಕಲಿಯದ ಆರೋಪಿಗಳು ಮತ್ತೆ ತಮ್ಮ ಹಳೇ ಚಾಳಿ ಮುಂದುವರಿಸಿದ್ದಾರೆ. ಇದರ ಭಾಗವಾಗಿ ಹೊಸ ವರ್ಷದ ಹಿಂದಿನ ದಿನವೂ ದರೋಡೆ ನಡೆಸಿ, ಈಗ ಮತ್ತೆ ಖಾಕಿ ಕೈಲಿ ತಗಲಾಕಿಕೊಂಡಿದ್ದಾರೆ.

ಕೆಂಗೇರಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದ್ದ ಪ್ರಕರಣ ಸಂಬಂಧ ಪೊಲೀಸರು ಮೂವರನ್ನು ಬಂಧಿಸಿದ್ದು, ತನಿಖೆ ಮುಂದುವರಿಸಿದ್ದಾರೆ.

ಕರ್ನಾಟಕ ಬ್ಯಾಂಕ್ ಲಿಮಿಟೆಡ್
ನಿಮ್ಮ ಕುಟುಂಬದ ಬ್ಯಾಂಕ್ ಭಾರತದಾದ್ಯಂತ.
Celebrating 100 Years of Trust 1924

ಶಾಖೆ: ಬೆಂಗಳೂರು- ಓವರ್‌ಸೀಸ್
ಮಾನಂದಿ ಪ್ಲಾಜಾ, ನಂ.3
ಸೆಂಟ್ ಮಾರ್ಕ್ಸ್ ರಸ್ತೆ, ಬೆಂಗಳೂರು-560 001
ಜಿಲ್ಲೆ: ಬೆಂಗಳೂರು ನಗರ, ಕರ್ನಾಟಕ

ದೂರವಾಣಿ : 080-22955884/9980519034
ಇ-ಮೇಲ್: blr.osb@ktkbank.com
ವೆಬ್‌ಸೈಟ್: www.karnatakabank.com
ಸಿಐಎನ್ : L85110KA1924PLC001128

ಲಾಕರ್ ಓಪನ್ ನೋಟೀಸ್

ಕ್ರ ಸಂ	ಲಾಕರ್ ಹೊಂದಿರುವವರ ಹೆಸರು ಮತ್ತು ವಿಳಾಸ	ಬಾಕಿ ಉಳಿದಿರುವ ಲಾಕರ್ ಬಾಡಿಗೆ	ಲಾಕರ್ ನಂ.	ನೋಟಿಸ್‌ನ ವಿವರಗಳು	ಮಿತಿ
1	**ಕೆ ಸತೀಶ್** ವಿಳಾಸ: 'ಕೃಷ್ಣ' # 6, 80 ಅಡಿ ರಸ್ತೆ ಹೆಚ್‌ಎಎಲ್ 3ನೇ ಹಂತ ಬೆಂಗಳೂರು-560075	ರೂ.28,320/-	2	18.07.2025	01.04.2022
2	**ಕೆ ಸತೀಶ್** ವಿಳಾಸ: 'ಕೃಷ್ಣ' # 6, 80 ಅಡಿ ರಸ್ತೆ ಹೆಚ್‌ಎಎಲ್ 3ನೇ ಹಂತ ಬೆಂಗಳೂರು-560075	ರೂ.28,320/-	6	18.07.2025	01.04.2022
3	**ಮೊಹಮ್ಮದ್ ಜಾಫರ್** ವಿಳಾಸ: ನಂ. 12 ಬೆನ್ಸನ್ ರಸ್ತೆ, ಬೆನ್ಸನ್ ಟೌನ್, ಬೆಂಗಳೂರು	ರೂ.28,320/-	3	18.07.2025	01.04.2022

"ಮೇಲೆ ತಿಳಿಸಿದ ಲಾಕರ್ ಹೋಲ್ಡರ್ **ಕರ್ನಾಟಕ ಬ್ಯಾಂಕ್, ಬೆಂಗಳೂರು ಓವರ್‌ಸೀಸ್ ಶಾಖೆ**ಯೊಂದಿಗೆ, ಲಾಕರ್ ಅನ್ನು ನಿರ್ವಹಿಸುತ್ತಿದ್ದು, ಮೇಲಿನ ಕೋಷ್ಟಕದ ಕಾಲಂ 5 ರಲ್ಲಿ ನಮೂದಿಸಲಾದ ದಿನಾಂಕಗಳಲ್ಲಿ ಅವಧಿ ಮೀರಿದ ಲಾಕರ್ ಬಾಡಿಗೆಯ ಪಾವತಿಗೆ ಸಂಬಂಧಿಸಿದಂತೆ ನಾವು ವಿವಿಧ ಸಂವಹನಗಳನ್ನು ಕಳುಹಿಸಿದ್ದೇವೆ. ಆದಾಗ್ಯೂ ವಿವಿಧ ಜ್ಞಾಪನೆಗಳ ಹೊರತಾಗಿಯೂ ನೀವು ಪಾವತಿ ಮಾಡಿರುವುದಿಲ್ಲ. ಆದ್ದರಿಂದ ಈ ಅಧಿಸೂಚನೆಯನ್ನು ಪ್ರಕಟಿಸಿದ **07 ದಿನಗಳ** ಒಳಗಾಗಿ ಮೇಲಿನ ಕೋಷ್ಟಕದ ಕಾಲಂ ಸಂಖ್ಯೆ 3 ರಲ್ಲಿ ನಮೂದಿಸಿರುವ ಬಾಕಿ ಉಳಿದ ಬಾಡಿಗೆಯನ್ನು ಠೇವಣಿ ಮಾಡಲು ಮೇಲೆ ತಿಳಿಸಲಾದ ಲಾಕರ್ ಹೊಂದಿರುವವರಿಗೆ ಮತ್ತೊಮ್ಮೆ ಈ ಮೂಲಕ ಸೂಚಿಸಲಾಗಿದೆ. ಬಾಡಿಗೆಯ ವಿಳಂಬ ಪಾವತಿಗಾಗಿ ಬಾಡಿಗೆ ಬಾಕಿಗಳ ಜೊತೆಗೆ ದಂಡದ ಮೊತ್ತವನ್ನು ಪಾವತಿಸಲು ಗ್ರಾಹಕರು ಹೊಣೆಗಾರರಾಗಿರುತ್ತಾರೆ. ಪಾವತಿ ಮಾಡದಿದ್ದರೆ, ಈ ಸೂಚನೆ ಪ್ರಕಟವಾದ 07 ದಿನಗಳ ನಂತರ ಲಾಕರ್ ಹೊಂದಿರುವವರ ರಿಸ್ಕ್ ಮತ್ತು ಜವಾಬ್ದಾರಿಯ ಮೇಲೆ ಬ್ಯಾಂಕ್ ಲಾಕರ್ ಅನ್ನು ಡ್ರಿಲ್ ಮಾಡಿ ತೆರೆಯುತ್ತದೆ. ಡ್ರಿಲ್ ತೆರೆಯುವಿಕೆಗೆ ಸಂಬಂಧಿಸಿದ ಎಲ್ಲಾ ವೆಚ್ಚಗಳು, ಖರ್ಚು ಮತ್ತು ಶುಲ್ಕಗಳು ಲಾಕರ್ ಹೊಂದಿರುವವರ ಖಾತೆಯಲ್ಲಿರುತ್ತವೆ.

ದಿನಾಂಕ: 13.01.2026
ಸ್ಥಳ: ಬೆಂಗಳೂರು

ಸಹಿ/- ಶಾಖಾ ವ್ಯವಸ್ಥಾಪಕರು
ಕರ್ನಾಟಕ ಬ್ಯಾಂಕ್ ಲಿ.,

ಪ್ರಯಾಣಿಕರ ಸಂಚಾರದಲ್ಲಿ ಹೊಸ ದಾಖಲೆ ಬರೆದ ಕೆಐಎ

ಬೆಂಗಳೂರು: ನಗರದ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವು ಮತ್ತೊಂದು ಮಹತ್ವದ ದಾಖಲೆಯನ್ನು ಬರೆದಿದೆ. ಕೆಐಎ ನಿಲ್ದಾಣದ ಮೂಲಕ 2025ರಲ್ಲೇ 4.3 ಕೋಟಿ ಪ್ರಯಾಣಿಕರು ಓಡಾಟ ನಡೆಸಿದ್ದು, ಜಾಗತಿಕ ಮಟ್ಟದಲ್ಲಿ ಹೊಸ ದಾಖಲೆ ನಿರ್ಮಿಸಿದೆ. ಬೆಂಗಳೂರು ವಿಮಾನ ನಿಲ್ದಾಣದ ಪ್ರಯಾಣಿಕರ ಸಂಖ್ಯೆಯಲ್ಲಿ ಕಳೆದ ವರ್ಷ ಶೇ.8ರಷ್ಟು ಹೆಚ್ಚಳವಾಗಿದೆ. 2025ರಲ್ಲಿ 4.3 ಕೋಟಿ ಪ್ರಯಾಣಿಕರು ಸಂಚಾರ ನಡೆಸಿದ್ದು, ಪ್ರಯಾಣಿಕರ ಸೇವೆ, ಕಾರ್ಯಕ್ಷಮತೆ, ಸರಕು ಹಾಗೂ ಸಾಗಾಣೆಯು ಏರಿಕೆಯಾಗಿದೆ. ಈ ಮೂಲಕ 2025ರಲ್ಲೇ ಪ್ರಯಾಣಿಕರು ಮತ್ತು ಸರಕು ಎರಡರಲ್ಲೂ ದಾಖಲೆಯ ಬೆಳವಣಿಗೆಯಾಗಿದೆ. ಕಳೆದ ವರ್ಷಕ್ಕಿಂತ ಈ ವರ್ಷ ಶೇ 8 ಏರಿಕೆಯಾಗಿದೆ. ಇದರಲ್ಲಿ ಶೇ 28.7 ಅಂತಾರಾಷ್ಟ್ರೀಯ ಪ್ರಯಾಣಿಕರು ಸಂಚರಿಸಿದ್ದಾರೆ. ಜತೆಗೆ ಅಂತಾರಾಷ್ಟ್ರೀಯ ನಿರ್ಗಮನಗಳು 38ರಿಂದ 51ಕ್ಕೆ ಹೆಚ್ಚಳವಾಗಿವೆ. 2025 ನವೆಂಬರ್ 23ರಂದು 1,37,317 ಪ್ರಯಾಣಿಕರು ಬೆಂಗಳೂರಿನಿಂದ ತೆರಳುವ ಮೂಲಕ ದಾಖಲೆ ನಿರ್ಮಿಸಿದೆ. 2025ರ ಅಕ್ಟೋಬರ್ 19ರಂದು ಗರಿಷ್ಠ 837 ಏರ್ ಟ್ರಾಫಿಕ್ ಮೂವ್‌ಮೆಂಟ್‌ಗಳಾಗಿದ್ದು, 5,20,985 ಟನ್‌ಗಳನ್ನು ನಿರ್ವಹಿಸಿದೆ. ವಿಮಾನ ನಿಲ್ದಾಣವು 5 ದೇಶೀಯ ಮತ್ತು 5 ಅಂತಾರಾಷ್ಟ್ರೀಯ ಸೇರಿ ಒಟ್ಟು 10 ಹೊಸ ಮಾರ್ಗಗಳನ್ನು ಸೇರಿಸಿಕೊಂಡಿದೆ.

VISHWAVANI TV SPECIAL
ಯುಟ್ಯೂಬ್ ಚಾನೆಲ್ ಸಬ್‌ಸ್ಕ್ರೈಬ್ ಆಗಿ

ಅನಧಿಕೃತ ಕಟ್ಟಡದ ಹೆಚ್ಚುವರಿ ಅಂತಸ್ತು ತೆರವು ಕಾರ್ಯಾಚರಣೆ

ನಗರ ಪಾಲಿಕೆ ಆಯುಕ್ತರ ನೇತೃತ್ವದಲ್ಲಿ ತೆರವು ಕಾರ್ಯಾಚರಣೆ ನಡೆಯಿತು.

ಬೆಂಗಳೂರು: ಬ್ಯಾಟರಾಯನಪುರ ವಿಭಾಗ ವ್ಯಾಪ್ತಿಯಲ್ಲಿನ ಜಕ್ಕೂರು ಉಪವಿಭಾಗದ ದಾಸರಹಳ್ಳಿ ಬಡಾವಣೆಯಲ್ಲಿ ನಕ್ಷೆ ಮಂಜೂರಾತಿ ಪಡೆಯದೆ ಅನಧಿಕೃತವಾಗಿ ಹಾಲಿ ನಿರ್ಮಿಸಿರುವ ನೆಲ+1 ಮಹಡಿಗಳ ಕಟ್ಟಡದ ಮೇಲೆ ಹೆಚ್ಚುವರಿಯಾಗಿ 2 ಅಂತಸ್ತು ಕಟ್ಟಡ ನಿರ್ಮಾಣ ಮಾಡಲಾಗುತ್ತಿತ್ತು. ಕಟ್ಟಡದ 4ನೇ ಅಂತಸ್ತಿಗೆ ಯಾವುದೇ ಪರವಾನಿಗೆಯನ್ನು ಪಡೆಯದೇ ಅನಧಿಕೃತವಾಗಿ ನಿರ್ಮಿಸಲಾಗುತ್ತಿತ್ತು. ಇದನ್ನು ಪತ್ತೆ ಹಚ್ಚಿದ ಬೆಂಗಳೂರು ಉತ್ತರ ನಗರ ಪಾಲಿಕೆಯ ಅಧಿಕಾರಿಗಳು ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ನೇತೃತ್ವದಲ್ಲಿ ತೆರವು ಕಾರ್ಯಾಚರಣೆಯನ್ನು ನಡೆಸಿದ್ದಾರೆ.

ನಗರ ಪಾಲಿಕೆ ವ್ಯಾಪ್ತಿಯ ಅನಧಿಕೃತ/ನಿಯಮ ಬಾಹಿರ ಕಟ್ಟಡಗಳನ್ನು ನಿಯಮಾನುಸಾರ ಪರಿಶೀಲಿಸಿ ಕೂಡಲೇ ತೆರವು ಕಾರ್ಯಾಚರಣೆ ಮಾಡಲು ಹಲವು ಸಭೆಗಳಲ್ಲಿ ನಗರ ಪಾಲಿಕೆ ಆಯುಕ್ತರು ಸೂಚನೆ ನೀಡಿದ್ದರು.

ಸ್ವತ್ತು ಸಂಖ್ಯೆ 73ರಲ್ಲಿ ಕಟ್ಟಡ ಮಾಲೀಕ ಗಿಲ್ ರಾಯ್ ರವರು 18x30 ಸೈಟ್ ನಲ್ಲಿ ನಕ್ಷೆ ಮಂಜೂರಾತಿ ಪಡೆಯದೇ ಅನಧಿಕೃತವಾಗಿ ಹಾಲಿ ನಿರ್ಮಿಸಿರುವ ನೆಲ+1 ಮಹಡಿಗಳ ಕಟ್ಟಡದ ಮೇಲೆ ಹೆಚ್ಚುವರಿಯಾಗಿ 2 ಅಂತಸ್ತು ಕಟ್ಟಡ ನಿರ್ಮಾಣ ಮಾಡುತ್ತಿದ್ದರು. ಕಟ್ಟಡದ ಮಾಲೀಕರು ಹೆಚ್ಚುವರಿಯಾಗಿ 2 ಅಂತಸ್ತು ಕಟ್ಟಡ ನಿರ್ಮಾಣ ಮಾಡುತ್ತಿರುವುದನ್ನು ನಿಲ್ಲಿಸಿ ಕಟ್ಟಿರುವ ಕಟ್ಟಡವನ್ನು ತೆರವುಗೊಳಿಸಲು ಹಲವು ಬಾರಿ ಸೂಚಿಸಿದ್ದರೂ ಸಹ ಈ ಬಗ್ಗೆ ಪಾಲಿಕೆಗೆ ಯಾವುದೇ ಮಾಹಿತಿ ಸಲ್ಲಿಸಿರುವುದಿಲ್ಲ.

ಆದ್ದರಿಂದ ಮಂಗಳವಾರ ಪಾಲಿಕೆ ಅಧಿಕಾರಿ ಗಳು ಸ್ಥಳ ಪರಿಶೀಲನೆ ನಡೆಸಿ, 4ನೇ ಮಹಡಿಯಲ್ಲಿ ನಿರ್ಮಿಸಿರುವಂತಹ ಗೋಡೆಗಳನ್ನು ಯಂತ್ರೋಪಕರಣಗಳನ್ನು ಬಳಸಿ ಸುಮಾರು 8 ಸಿಬ್ಬಂದಿ ತೆರವು ಕಾರ್ಯಾಚರಣೆಯನ್ನು ನಡೆಸಿದ್ದಾರೆ. ಈ ವೇಳೆ ಬ್ಯಾಟರಾಯನಪುರ ವಿಭಾಗದ ಕಾರ್ಯಪಾಲಕ ಅಭಿಯಂತರ ಸಚಿನ್, ಸಹಾಯಕ ಕಾರ್ಯಪಾಲಕ ಅಭಿಯಂತರ ವರುಣ್, ಜಕ್ಕೂರು ವಿಭಾಗದ ಸಹಾಯಕ ಅಭಿಯಂತರರು, ಅಧಿಕಾರಿಗಳು ಇದ್ದರು.

ಸಮಾಚಾರ ಸಣ್ಣದಲ್ಲ

ಪುಸ್ತಕ ಖರೀದಿಗೆ 25 ಕೋಟಿ ನೀಡಲು ಮನವಿ

ಬೆಂಗಳೂರು: ಪ್ರಸ್ತುತ ನಡೆಯುವ ರಾಜ್ಯ ಬಜೆಟ್‌ನಲ್ಲಿ ಕನ್ನಡ ಪುಸ್ತಕಗಳ ಏಕಗವಾಕ್ಷಿ ಖರೀದಿಗಾಗಿ 25 ಕೋಟಿ ರು. ಹಣ ಮೀಸಲಿರಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕರ್ನಾಟಕ ಲೇಖಕ -ಪ್ರಕಾಶಕರ ಮತ್ತು ಮುದ್ರಕರ ಒಕ್ಕೂಟ ಮನವಿ ಸಲ್ಲಿಸಿದೆ. ಕಾಂಗ್ರೆಸ್ ಸರಕಾರ ಕಳೆದ ವರ್ಷದ ಬಜೆಟ್‌ನಲ್ಲಿ ಹತ್ತು ಕೋಟಿ ರು.ಗಳನ್ನು ಕನ್ನಡ ಪುಸ್ತಕಗಳ ಖರೀದಿಗೆ ಮೀಸಲಿಟ್ಟದ್ದು ಒಂದು ದಾಖಲೆಯಾಗಿದೆ. ಆದರೆ, ಇಂದು ಕನ್ನಡ ಪುಸ್ತಕೋದ್ಯಮವು ಹಲವು ಸಮಸ್ಯೆಗಳನ್ನು ಎದುರಿಸುತ್ತಿದೆ. ಕಚ್ಚಾ ವಸ್ತುಗಳ ಬೆಲೆ ಏರಿಕೆ ಹಾಗೂ ಜಿಎಸ್‌ಟಿ ಮುಂತಾದ ಅಡೆತಡೆಗಳಿಂದ ಪುಸ್ತಕೋದ್ಯಮದ ಮೇಲೆ ಹೆಚ್ಚಿನ ಒತ್ತಡ ಉಂಟಾಗಿದೆ. ಇಂತಹ ಪರಿಸ್ಥಿತಿಯಲ್ಲಿಯೂ ಕನ್ನಡ ಸಾಹಿತ್ಯ ಜಾಗತಿಕ ಮಟ್ಟದಲ್ಲಿ ಗುರುತಿಸಿಕೊಳ್ಳುತ್ತಿರುವುದು ಹೆಮ್ಮೆಯ ವಿಷಯ. ಆದರೆ, ಸರಕಾರದ ಕೆಲವು ನೀತಿ ನಿರ್ಧಾರಗಳ ಕಾರಣದಿಂದ ಪುಸ್ತಕಗಳ ಖರೀದಿ ಹಾಗೂ ವಿತರಣೆ ಪ್ರಕ್ರಿಯೆಗಳು ಸಮರ್ಪಕವಾಗಿ ನಡೆಯುತ್ತಿಲ್ಲ. ದಯಮಾಡಿ ಪ್ರಸ್ತುತ ಬಜೆಟ್‌ನಲ್ಲಿ ಕನ್ನಡ ಪುಸ್ತಕಗಳ ಏಕ ಗವಾಕ್ಷಿ ಖರೀದಿ ಯೋಜನೆಗಾಗಿ 25 ಕೋಟಿ ರು. ಮೊತ್ತವನ್ನು ಮೀಸಲಿರಿಸುವಂತೆ ಮನವಿ ಮಾಡಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

ದೇಶದಲ್ಲಿ ಮೊದಲ ಇವಿ ಚಾರ್ಜಿಂಗ್, ಬ್ಯಾಟರಿ ವಿನಿಮಯ ಕೇಂದ್ರ ಸ್ಥಾಪನೆ | ರಾಜ್ಯಾದ್ಯಂತ ಇವಿ ಮೂಲಸೌಕರ್ಯದ ಅಭಿವೃದ್ಧಿಗೆ ವೇಗ

ಬೆಸ್ಕಾಂನಿಂದ ಲ್ಯಾಂಡ್ ಅಗ್ರಿಗೇಟರ್ ಪೋರ್ಟಲ್ ಬಿಡುಗಡೆ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಬೆಸ್ಕಾಂ ರಾಜ್ಯದಲ್ಲಿ ಹಸಿರು ಚಲನಶೀಲತೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ದೇಶದಲ್ಲೇ ಮೊದಲ ಬಾರಿಗೆ ಇವಿ ಚಾರ್ಜಿಂಗ್ ಹಾಗೂ ಬ್ಯಾಟರಿ ವಿನಿಮಯ ಕೇಂದ್ರವನ್ನು ಸ್ಥಾಪಿಸಿದ್ದು, ಇಂಧನ ಸಚಿವ ಕೆ.ಜೆ.ಜಾರ್ಜ್ ಉದ್ಘಾಟಿಸಿದರು.

ಬೆಸ್ಕಾಂ ದೇಶದಲ್ಲೇ ಮೊದಲ ಬಾರಿಗೆ ಇವಿ ಚಾರ್ಜಿಂಗ್ ಹಾಗೂ ಬ್ಯಾಟರಿ ವಿನಿಮಯ ಕೇಂದ್ರಗಳ ಸ್ಥಾಪನೆ ಹಾಗೂ ತ್ವರಿತ ವಿದ್ಯುತ್ ಸಂಪರ್ಕಕ್ಕೆ ಏಕ ಗವಾಕ್ಷಿ ವ್ಯವಸ್ಥೆಯನ್ನು ಹೊಂದಿರುವ ಲ್ಯಾಂಡ್ ಅಗ್ರಿಗೇಟರ್ ಪೋರ್ಟಲ್‌ನ್ನು ಬಿಡುಗಡೆ ಮಾಡಿದ್ದು, ಈ ಡಿಜಿಟಲ್ ವೇದಿಕೆ ರಾಜ್ಯಾದ್ಯಂತ ಇವಿ ಮೂಲಸೌಕರ್ಯದ ಅಭಿವೃದ್ಧಿಗೆ ವೇಗ ನೀಡುವ ಜತೆಗೆ ಸ್ವಚ್ಛ ಚಲನಶೀಲತೆಯನ್ನು ಉತ್ತೇಜಿಸುವ ಗುರಿ ಹೊಂದಿದೆ. ಖಾಸಗಿ ಭೂಮಾಲೀಕರು, ಸರಕಾರಿ ಇಲಾಖೆಗಳು, ಖಾಸಗಿ ಸಂಸ್ಥೆಗಳು ಹಾಗೂ ಚಾರ್ಜ್ ಸ್ಟೇಷನ್ ಆಪರೇಟರ್‌ಗಳು ರಾಜ್ಯಾದ್ಯಂತ ಇವಿ ಚಾರ್ಜಿಂಗ್ ಹಾಗೂ ಬ್ಯಾಟರಿ ವಿನಿಮಯ ಕೇಂದ್ರಗಳನ್ನು ಸ್ಥಾಪಿಸಲು ಹಾಗೂ ಬೆಸ್ಕಾಂನಿಂದ ವಿದ್ಯುತ್ ಸಂಪರ್ಕವನ್ನು ತ್ವರಿತವಾಗಿ ಪಡೆಯಲು ಏಕ ಗವಾಕ್ಷಿ ವ್ಯವಸ್ಥೆಯನ್ನು ಪೋರ್ಟಲ್‌ನಲ್ಲಿ ಕಲ್ಪಿಸಲಾಗಿದೆ.

ನಗರ ಹಾಗೂ ಹೆದ್ದಾರಿ ಪ್ರದೇಶಗಳಲ್ಲಿ ಸಾರ್ವಜನಿಕ ಇವಿ ಮೂಲಸೌಕರ್ಯಗಳನ್ನು ಅತ್ಯಂತ ತ್ವರಿತಗತಿಯಲ್ಲಿ ಸ್ಥಾಪಿಸಲು ಭೂಮಾಲೀಕರು ಮತ್ತು ಚಾರ್ಜಿಂಗ್ ಆಪರೇಟರ್‌ಗಳಿಗೆ ಲ್ಯಾಂಡ್ ಅಗ್ರಿಗೇಟರ್ ಪೋರ್ಟಲ್ ನೆರವಾಗಲಿದೆ. ಇವಿ ಹಬ್‌ಗಳ ನಿರ್ಮಾಣವನ್ನು ಉತ್ತೇಜಿಸುವ ಸಲುವಾಗಿ ರಾಷ್ಟ್ರೀಯ ಹೆದ್ದಾರಿ, ಇವಿ ವಿಭಾಗ ಈ ಉಪಕ್ರಮದಲ್ಲಿ ಬೆಸ್ಕಾಂ ಜತೆ ಕೈಜೋಡಿಸಿದೆ. ಸ್ವಚ್ಛ ಚಲನಶೀಲತೆ, ಸಾರ್ವಜನಿಕ-ಖಾಸಗಿ ಸಹಭಾಗಿತ್ವ ಮತ್ತು

ವಿಸ್ತರಣೆಗೆ ಅನುಕೂಲಕರವಾದ ಇವಿ ಮೂಲಸೌಕರ್ಯವನ್ನು ಉತ್ತೇಜಿಸುವ ಉದ್ದೇಶದಿಂದ ಲ್ಯಾಂಡ್ ಅಗ್ರಿಗೇಟರ್ ಪೋರ್ಟಲ್‌ನ್ನು ಅಭಿವೃದ್ಧಿಪಡಿಸಲಾಗಿದೆ.

ಈ ಪೋರ್ಟಲ್ ಮೂಲಕ ಭೂಮಾಲೀಕರು ತಮ್ಮ ಭೂಮಿಯನ್ನು ಇವಿ ಚಾರ್ಜಿಂಗ್ ಹಾಗೂ ಬ್ಯಾಟರಿ ವಿನಿಮಯ ಕೇಂದ್ರಗಳ ಸ್ಥಾಪನೆಗೆ ಆದಾಯ ಹಂಚಿಕೆ ಆಧಾರದ ಮೇಲೆ ಬಾಡಿಗೆಗೆ ಅಥವಾ ಭೋಗ್ಯಕ್ಕೆ ನೀಡಲು ಅವಕಾಶ ಇದೆ. ಅದೇ ರೀತಿ ವಿತರಕರು ಮತ್ತು ಚಾರ್ಜ್ ಪಾಯಿಂಟ್ ಆಪರೇಟರ್‌ಗಳು ಇವಿ ಚಾರ್ಜಿಂಗ್ ಕೇಂದ್ರಗಳ ಸ್ಥಾಪನೆ, ಕಾರ್ಯಾಚರಣೆ ಹಾಗೂ ನಿರ್ವಹಣೆಯನ್ನು ವಹಿಸಿಕೊಳ್ಳಬಹುದು. ಏಕ-ಗವಾಕ್ಷಿ ಡಿಜಿಟಲ್ ಡ್ಯಾಶ್‌ಬೋರ್ಡ್ ಮೂಲಕ ವಿದ್ಯುತ್ ಸಂಪರ್ಕವನ್ನು ಸಮಯಕ್ಕೆ ಸರಿಯಾಗಿ ಒದಗಿಸಿ, ವಿಳಂಬವನ್ನು ಕಡಿಮೆ ಮಾಡುವುದರ ಜತೆಗೆ ಎಲ್ಲ ಹಿತಾಸಕ್ತಿದಾರರ ನಡುವೆ ಸಮನ್ವಯ ಸಾಧಿಸಲು ನೆರವಾಗಲಿದೆ.

ಲ್ಯಾಂಡ್ ಅಗ್ರಿಗೇಟರ್ ಪೋರ್ಟಲ್, ಕರ್ನಾಟಕದಲ್ಲಿ ಬಲಿಷ್ಠ ಮತ್ತು ಭವಿಷ್ಯದ ಇವಿ ಪರಿಸರ ವ್ಯವಸ್ಥೆ ನಿರ್ಮಾಣದತ್ತ ಮಹತ್ವದ ಹೆಜ್ಜೆಯಾಗಿದೆ. ಭೂ ಸಂಗ್ರಾಹಕ ಹಾಗೂ ವಿದ್ಯುತ್ ಪೂರೈಕೆ ಪ್ರಕ್ರಿಯೆಯನ್ನು ಸರಳಗೊಳಿಸುವ ಮೂಲಕ ಈ ಉಪಕ್ರಮವು ರಾಜ್ಯದ ಬದಲಾವಣೆಗೆ ಸಹಕಾರಿಯಾಗಿರುವ ಕಡಿಮೆ ಕಾರ್ಬನ್ ಆರ್ಥಿಕತೆಯನ್ನು ಸಾಧಿಸಲಿದೆ ಹಾಗೂ ಸ್ಥಳೀಯ ಆರ್ಥಿಕ ಅವಕಾಶ ಸೃಷ್ಟಿಸಿ, ಗ್ರಾಹಕರಿಗೆ ಇವಿ ಬಳಕೆಯನ್ನು ಉತ್ತೇಜಿಸಲಿದೆ.

ಪ್ರಮುಖ ಉದ್ದೇಶಗಳು

- ಇವಿ ಮೂಲಸೌಕರ್ಯ ಅಭಿವೃದ್ಧಿ ಹಾಗೂ ಬ್ಯಾಟರಿ ವಿನಿಮಯ ಕೇಂದ್ರಗಳ ಸ್ಥಾಪನೆಗೆ ಭೂಮಿಯನ್ನು ಬಾಡಿಗೆಗೆ ನೀಡುವ ಅವಕಾಶಗಳಿಗೆ ಉತ್ತೇಜನ.
- ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆ ಹಾಗೂ ಅನುಮೋದನಾ ಪ್ರಕ್ರಿಯೆ ಪ್ರಗತಿ ಪರಿಶೀಲನೆ.
- ಭೂಮಾಲೀಕರು ಸುಲಭವಾಗಿ ನೋಂದಣಿ ಮಾಡಿಕೊಂಡು ತಮ್ಮ ಭೂಮಿಯನ್ನು ಇವಿ ಚಾರ್ಜಿಂಗ್ ಮತ್ತು ಬ್ಯಾಟರಿ ವಿನಿಮಯ ಕೇಂದ್ರಗಳಿಗೆ ನೀಡುವ ವ್ಯವಸ್ಥೆ.
- ವೆಂಡರ್ಸ್ ಹಾಗೂ ಚಾರ್ಜ್ ಸ್ಟೇಷನ್ ಆಪರೇಟರ್‌ಗಳು ಚಾರ್ಜಿಂಗ್ ಮತ್ತು ಬ್ಯಾಟರಿ ವಿನಿಮಯ ಕೇಂದ್ರಗಳನ್ನು ಸ್ಥಾಪಿಸಿ ಹಾಗೂ ಅದರ ಕಾರ್ಯಾಚರಣೆಯನ್ನು ನಿರ್ವಹಿಸಬಹುದು.
- ಪೋರ್ಟಲ್ ಮೂಲಕ ಬೆಸ್ಕಾಂ, ಚಾರ್ಜ್ ಸ್ಟೇಷನ್ ಆಪರೇಟರ್‌ಗಳೊಂದಿಗೆ ಸಂಪರ್ಕಿಸಿ ಇವಿ ಚಾರ್ಜಿಂಗ್ ಅಥವಾ ಬ್ಯಾಟರಿ ವಿನಿಮಯ ಕೇಂದ್ರ ಸ್ಥಾಪನೆಗೆ ಸಹಕಾರ ನೀಡಲಿದೆ.

ಲ್ಯಾಂಡ್ ಅಗ್ರಿಗೇಟರ್ ಪೋರ್ಟಲ್, ಖಾಸಗಿ ಭೂಮಾಲಿಕರು, ಸರಕಾರಿ ಇಲಾಖೆಗಳು ಹಾಗೂ ಖಾಸಗಿ ಸಂಸ್ಥೆಗಳು ತಮ್ಮ ಭೂಮಿಯನ್ನು ನೀಡಲು ಹಾಗೂ ಚಾರ್ಜಿಂಗ್ ಸ್ಟೇಷನ್ ಆಪರೇಟರ್‌ಗಳು ರಾಜ್ಯಾದ್ಯಂತ ಇವಿ ಚಾರ್ಜಿಂಗ್ ಮತ್ತು ಬ್ಯಾಟರಿ ವಿನಿಮಯ ಕೇಂದ್ರಗಳನ್ನು ಸ್ಥಾಪಿಸಲು ಒಂದೇ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ. ಆದಾಯ ಹಂಚಿಕೆ ಮಾದರಿಯಲ್ಲಿ ಭೂಮಿ ಬಾಡಿಗೆ ನೀಡಲು ಇದು ಅವಕಾಶ ಕಲ್ಪಿಸುತ್ತದೆ
– ಕೆ.ಜೆ.ಜಾರ್ಜ್ ಇಂಧನ ಸಚಿವ

ಲ್ಯಾಂಡ್ ಅಗ್ರಿಗೇಟರ್ ಪೋರ್ಟಲ್ ಸ್ವಚ್ಛ ಚಲನಶೀಲತೆಯನ್ನು ಉತ್ತೇಜಿಸುವುದರ ಜತೆಗೆ ಸಾರ್ವಜನಿಕ-ಖಾಸಗಿ ಸಹಭಾಗಿತ್ವವನ್ನು ಬಲಪಡಿಸಿ, ಸ್ಥಳೀಯ ಸಮುದಾಯಗಳಿಗೆ ಆರ್ಥಿಕ ಅವಕಾಶಗಳನ್ನು ಸೃಷ್ಟಿಸುತ್ತದೆ. ಇವಿ ಚಾರ್ಜಿಂಗ್ ಮತ್ತು ಬ್ಯಾಟರಿ ವಿನಿಮಯ ಕೇಂದ್ರಗಳ ಸ್ಥಾಪನೆಯನ್ನು ಸುಲಭಗೊಳಿಸುವ ಮೂಲಕ, ಈ ಉಪಕ್ರಮವು ಕರ್ನಾಟಕವನ್ನು ಕಡಿಮೆ ಕಾರ್ಬನ್ ಆರ್ಥಿಕತೆಯತ್ತ ಮುನ್ನಡೆಸಲು ಸಹಕಾರಿಯಾಗಿದೆ.
– ಡಾ.ಎನ್.ಶಿವಶಂಕರ ವ್ಯವಸ್ಥಾಪಕ ನಿರ್ದೇಶಕ ಬೆಸ್ಕಾಂ

ಹಿಟಾಚಿ ಎನರ್ಜಿ ಇಂಡಿಯಾ ಸಂಸ್ಥೆ ವತಿಯಿಂದ ದಿ ಎನರ್ಜಿ ರನ್ 2.0 ಕಾರ್ಯಕ್ರಮ ಜ.13ರಂದು ಬೆಂಗಳೂರಿನಲ್ಲಿ ಆಯೋಜಿಸಲಾಗಿತ್ತು. ಈ ವೇಳೆ ಹಿಟಾಚಿ ಎನರ್ಜಿ ಇಂಡಿಯಾದ ಭಾರತ ಮತ್ತು ದಕ್ಷಿಣ ಏಷ್ಯಾ ಪ್ರದೇಶದ ಸಿಎಚ್‌ಆರ್‌ಒ ನೇಹಾ ಅಹ್ಲುವಾಲಿಯಾ, ವ್ಯವಸ್ಥಾಪಕ ನಿರ್ದೇಶಕ ಮತ್ತು ಸಿಇಒ ಎನ್. ವೇಣು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಹಳದಿ ಮಾರ್ಗದಲ್ಲಿ 7ನೇ ರೈಲು ಸಂಚಾರ

ಬೆಂಗಳೂರು: ನಮ್ಮ ಮೆಟ್ರೋದ ಹಳದಿ ಮಾರ್ಗಕ್ಕೆ ಸಂಕ್ರಾಂತಿಯಂದು ಏಳನೇ ರೈಲು ಸೇರ್ಪಡೆಯಾಗಲಿದ್ದು, ಈ ಮೂಲಕ ಆವರ್ತನ ಸಮಯವು 13 ನಿಮಿಷದಿಂದ 10 ನಿಮಿಷಗಳಿಗೆ ಇಳಿಕೆಯಾಗಲಿದೆ.

ಹಳದಿ ಮೆಟ್ರೋ ಮಾರ್ಗಕ್ಕೆ 7ನೇ ರೈಲು ಸೇರ್ಪಡೆಯಾಗಲಿದ್ದು, ಪೀಕ್ ಅವರ್‌ನಲ್ಲಿ ಪ್ರತಿ ರೈಲು ನಡುವಿನ ಸಮಯ 13 ರಿಂದ 10 ನಿಮಿಷಕ್ಕೆ ಇಳಿಯಲಿದೆ. ಸದ್ಯ ಮಾರ್ಗದಲ್ಲಿ 6 ರೈಲು ಸಂಚಾರ ನಡೆಸುತ್ತಿದ್ದು, ಪೀಕ್ ಅವರ್‌ನಲ್ಲಿ 13 ನಿಮಿಷಕ್ಕೊಂದು ರೈಲು ಓಡಾಟ ಮಾಡುತ್ತಿವೆ. ಭಾನುವಾರ ಮತ್ತು ನಾನ್ ಪೀಕ್ ಅವರ್‌ನಲ್ಲಿ 15 ರಿಂದ 14 ನಿಮಿಷಕ್ಕೆ ರೈಲು ಓಡಾಟ ನಡುವಿನ ಅಂತರ ಇಳಿಕೆಯಾಗಲಿದೆ ಎಂದು ನಮ್ಮ ಮೆಟ್ರೋ ತಿಳಿಸಿದೆ. ಎಲ್ಲಾ ದಿನಗಳಲ್ಲಿ ಆರ್.ವಿ. ರಸ್ತೆ ಹಾಗೂ ಬೊಮ್ಮಸಂದ್ರ ಟರ್ಮಿನಲ್ ನಿಲ್ದಾಣಗಳಿಂದ ಮೊದಲ ಮತ್ತು ಕೊನೆಯ ರೈಲುಗಳ ಸಮಯದಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ. ಪ್ರಯಾಣಿಕರು ಈ ಪರಿಷ್ಕೃತ ಸಂಚಾರ ಅವಧಿಯನ್ನು ಗಮನಿಸಿ ಸುಧಾರಿತ ಮೆಟ್ರೋ ಸೇವೆಗಳನ್ನು ಬಳಸಿಕೊಳ್ಳಬೇಕು ಎಂದು ಮೆಟ್ರೋ ಮನವಿ ಮಾಡಿದೆ.

ವಿಪ್ರ ಬಿಸಿನೆಸ್ ಫೋರಂಗೆ ನೂತನ ಪದಾಧಿಕಾರಿಗಳ ಆಯ್ಕೆ

ಬೆಂಗಳೂರು: ಕಳೆದ 7 ವರ್ಷಗಳಿಂದ ಸಕ್ರಿಯವಾಗಿರುವ, ವ್ಯಾಪಾರ ಮತ್ತು ಉದ್ಯಮ ಕ್ಷೇತ್ರದಲ್ಲಿ ತನ್ನದೇ ಗುರುತು ಮೂಡಿಸಿರುವ ವಿಪ್ರ ಬಿಸಿನೆಸ್ ಫೋರಂನ ನೂತನ ಪದಾಧಿಕಾರಿಗಳ ಆಯ್ಕೆ ಇತ್ತೀಚೆಗೆ ನಡೆದ ವಾರ್ಷಿಕ ಮಹಾಸಭೆಯಲ್ಲಿ ಅವಿರೋಧವಾಗಿ ನಡೆಯಿತು.

ಈ ಸಂದರ್ಭದಲ್ಲಿ ಅಧ್ಯಕ್ಷರಾಗಿ ಆನಂದ್, ಗೌರವಾಧ್ಯಕ್ಷರಾಗಿ ಕಾವೇರಿ ಕಾರ್ಸ್ ಸಂಸ್ಥೆಯ ಸ್ಥಾಪಕ ಕೆ.ರಾಧಾಕೃಷ್ಣ ಹೊಳ್ಳ, ಪ್ರಧಾನ ಕಾರ್ಯದರ್ಶಿಯಾಗಿ ವಿಜಯರಾವ್, ಉಪಾಧ್ಯಕ್ಷರಾಗಿ ಸತ್ಯಬೋಧ ಕುಲಕರ್ಣಿ, ಖಜಾಂಚಿಯಾಗಿ ರಂಗಸ್ವಾಮಿ, ಬೈಲಾ ಸಮಿತಿಯ ಅಧ್ಯಕ್ಷರಾಗಿ ರಂಗನಾಥ ಅಡಿಗ, ವೆಂಕಟೇಶ, ಜಂಟಿ ಕಾರ್ಯದರ್ಶಿಯಾಗಿ ನವನೀತ್ ಜೋಶಿ ಹಾಗೂ ಸಲಹೆಗಾರರಾಗಿ ಕಾಮತ್ ಗ್ರೂಪ್ ಹೋಟೆಲ್ ಮಾಲೀಕ ವೀರೇಂದ್ರ ಕಾಮತ್ ಆಯ್ಕೆಯಾದರು. ನೂತನ ಪದಾಧಿಕಾರಿಗಳ ತಂಡವು ಸಂಘಟನೆಯನ್ನು ಇನ್ನಷ್ಟು ಬಲಪಡಿಸಿ, ಸದಸ್ಯರ ನಡುವಿನ ಸಹಕಾರ ಮತ್ತು ವಿಶ್ವಾಸ ವೃದ್ಧಿಸುವ ಉದ್ದೇಶ ಹೊಂದಿದೆ. ಸಭೆಯಲ್ಲಿ ಆತ್ರೇಯ, ಅಗಸ್ತ್ಯ, ಭಾರದ್ವಾಜ, ವಸಿಷ್ಠ ಮತ್ತು ಕಾಶ್ಯಪ್ಪ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಹೊಸ ಭಾಷಾ ವಿಧೇಯಕ ಹಿಂದಿನ ವಿಧೇಯಕಕ್ಕಿಂತಲೂ ಅಪಾಯಕಾರಿ: ನ್ಯಾಯವಾದಿ ಮುರಳೀಧರ ಬಳ್ಳುಕರಾಯ

ಪ್ರತಿಭಟನೆಗೆ ಸಜ್ಜಾದ ಕಾಸರಗೋಡು ಕನ್ನಡಿಗರು

ವಿಶ್ವವಾಣಿ ಸುದ್ದಿಮನೆ ಕಾಸರಗೋಡು

ಕೇರಳದಲ್ಲಿ ಈಗಾಗಲೇ ಮಲಯಾಳಂ ಭಾಷೆ ಪ್ರಮುಖ ಭಾಷೆಯಾಗಿರುವಾಗ ಮತ್ತೆ ಪ್ರತ್ಯೇಕ ಭಾಷೆ ವಿಧೇಯಕ ಮಂಡಿಸುವ ಅಗತ್ಯವೇನಿತ್ತು. ಇದು ಕಾಸರಗೋಡಿನ ಕನ್ನಡಿಗರ ಹಕ್ಕನ್ನು ಕಸಿಯುವ ಹುನ್ನಾರವಾಗಿದೆ ಎಂದು ನ್ಯಾಯವಾದಿ ಮುರಳೀಧರ ಬಳ್ಳುಕರಾಯ ಆರೋಪಿಸಿದರು.

ಕೇರಳ ಸರಕಾರ ಜಾರಿಗೊಳಿಸಿರುವ ಮಲಯಾಳಂ ಭಾಷಾ ವಿಧೇಯಕ ವಿರೋಧಿಸಿ ಕನ್ನಡ ಪರ ಸಂಘಟನೆಗಳು ಕಾಸರಗೋಡಿನ ಅಡ್ಕತ್ತಬೈಲಿನ ಕನ್ನಡ ಅಧ್ಯಾಪಕ ಸಂಘದ ಕಚೇರಿಯಲ್ಲಿ ಸಭೆ ನಡೆಸಿ ಮುಂದಿನ ಹೋರಾಟಕ್ಕೆ ಸಂಬಂಧಿಸಿದಂತೆ ಚರ್ಚಿಸಿದರು. ಈ ವೇಳೆ ಮಾತನಾಡಿದ ಮುರಳೀಧರ ಬುಳ್ಳಕರಾಯ, ಕಾಸರಗೋಡನ್ನು ಹೊರತುಪಡಿಸಿ ಕೇರಳದ ಇತರ ಕಡೆ ಮಲಯಾಳಂ ಕಡ್ಡಾಯಗೊಳಿಸುವುದಕ್ಕೆ ನಮ್ಮ ವಿರೋಧವಿಲ್ಲ. ಆದರೆ ಹೊಸ ಭಾಷಾ ವಿಧೇಯಕ ಹಿಂದಿನ ವಿಧೇಯಕಕ್ಕಿಂತಲೂ ಅಪಾಯಕಾರಿ ಆಗಿದ್ದು, ಭಾಷಾ ವಿಧೇಯಕಕ್ಕೆ ರಾಜ್ಯಪಾಲರು ಅಂಕಿತ ನೀಡಿದರೆ ಕಾಸರಗೋಡು ಜಿಲ್ಲೆಯಲ್ಲಿ ಕನ್ನಡ ಭಾಷೆ, ಕನ್ನಡಿಗರನ್ನು ಇಲ್ಲದಾಗಿಸುವ ಹುನ್ನಾರವನ್ನು ಹೊಂದಿದೆ. ಆದ್ದರಿಂದ ಎಲ್ಲರೂ ಎಚ್ಚೆತ್ತು ಈ ವಿಧೇಯಕವನ್ನು ವಿರೋಧಿಸಬೇಕು ಎಂದು ಎಚ್ಚರಿಸಿದರು.

ಶಾಲೆಗಳಲ್ಲಿ ಮಲಯಾಳಂ ಭಾಷೆ ಕಡ್ಡಾಯಗೊಳಿಸಿದರೆ, ಕನ್ನಡ ವಿದ್ಯಾರ್ಥಿಗಳು ಹೆಚ್ಚುವರಿ ಮಲಯಾಳಂ ಭಾಷೆಯನ್ನು ಕಲಿಯಬೇಕು ಮತ್ತು ಮುಂದಿನ ಶಿಕ್ಷಣ ಮಲಯಾಳದಲ್ಲಿಯೇ ಪಡೆಯಬೇಕಾಗುತ್ತದೆ. ಈ ವಿಧೇಯಕದಲ್ಲಿ ಇಂಗ್ಲೀಷ್ ಮಾಧ್ಯಮ ಶಾಲೆಗಳನ್ನು ಸೇರಿಸದೇ ಇರುವುದು ಕನ್ನಡಿಗರ ಮೇಲೆ ಭಾಷೆಯನ್ನು ಹೇರುವ ಸ್ಪಷ್ಟ ಪ್ರಯತ್ನವಾಗಿದೆ. ಈ ಹಿನ್ನಲೆಯಲ್ಲಿ ಜಿಲ್ಲೆಯ ಎಲ್ಲಾ ಕನ್ನಡಪರ ಸಂಘಟನೆಗಳು ಕೂಡಲೇ ಪ್ರತಿಭಟನೆ ನಡೆಸಿ ಸರಕಾರಕ್ಕೆ ಎಚ್ಚರಿಕೆ ನೀಡಬೇಕು ಎಂದರು.

ಸಭೆಯಲ್ಲಿ ಕನ್ನಡ ಅಧ್ಯಾಪಕ ಸಂಘದ ಪ್ರಧಾನ ಕಾರ್ಯದರ್ಶಿ ಪ್ರದೀಪ್ ಕುಮಾರ್ ಶೆಟ್ಟಿ , ಅಧ್ಯಕ್ಷ ಸುಕೇಶ್ ಎ., ಕನ್ನಡ ಸಾಹಿತ್ಯ ಪರಿಷತ್ತು ಕೇರಳ ಗಡಿನಾಡ ಘಟಕ ಅಧ್ಯಕ್ಷ ಡಾ. ಜಯಪ್ರಕಾಶ್ ನಾರಾಯಣ ತೊಟ್ಟೆತ್ತೋಡಿ, ಭಾಸ್ಕರ ಕೆ., ಎಂ.ವಿ. ಮಹಾಲಿಂಗೇಶ್ವರ ಭಟ್, ಡಿ. ಜಯನಾರಾಯಣ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಮಲಯಾಳಂ ಭಾಷಾ ವಿಧೇಯಕ ವಿರೋಧಿಸಿ ಕಾಸರಗೋಡಿನ ಅಡ್ಕತ್ತಬೈಲಿನ ಕನ್ನಡ ಅಧ್ಯಾಪಕ ಸಂಘದ ಕಚೇರಿಯಲ್ಲಿ ಕನ್ನಡ ಪರ ಸಂಘಟನೆಗಳು ಸಭೆ ಆಯೋಜಿಸಲಾಗಿತ್ತು. ಸಭೆಯಲ್ಲಿ ಮುರಳೀಧರ ಬಳ್ಳುಕರಾಯ, ಕನ್ನಡ ಅಧ್ಯಾಪಕ ಸಂಘದ ಪ್ರಧಾನ ಕಾರ್ಯದರ್ಶಿ ಪ್ರದೀಪ್ ಕುಮಾರ್ ಶೆಟ್ಟಿ , ಅಧ್ಯಕ್ಷ ಸುಕೇಶ್ ಎ., ಕನ್ನಡ ಸಾಹಿತ್ಯ ಪರಿಷತ್ತು ಕೇರಳ ಗಡಿನಾಡ ಘಟಕ ಅಧ್ಯಕ್ಷ ಡಾ. ಜಯಪ್ರಕಾಶ ನಾರಾಯಣ ತೊಟ್ಟೆತೋಡಿ, ಭಾಸ್ಕರ ಕೆ., ಎಂ.ವಿ. ಮಹಾಲಿಂಗೇಶ್ವರ ಭಟ್, ಡಿ. ಜಯನಾರಾಯಣ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಅಧಿಕಾರಿಗಳಿಗೆ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಸೂಚನೆ

ಅನಧಿಕೃತ ಕಟ್ಟಡಗಳಿಗೆ ನೋಟಿಸ್ ನೀಡಿ

ಬೆಂಗಳೂರು: ಅನಧಿಕೃತ ಕಟ್ಟಡಗಳಿಗೆ ನೋಟಿಸ್ ನೀಡಿ, ತಂಡಗಳನ್ನು ರಚಿಸಿ ತೆರವು ಕಾರ್ಯಾಚರಣೆ ನಡೆಸಿ ಎಂದು ಅಧಿಕಾರಿಗಳಿಗೆ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಸೂಚನೆ ನೀಡಿದರು.

ಬೆಂಗಳೂರು ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯ ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ಮಲ್ಲೇಶ್ವರ ಐಪಿಪಿ ಕೇಂದ್ರದಲ್ಲಿ ಇಂದು ನಡೆದ ಸಭೆಯನ್ನು ಉದ್ದೇಶಿಸಿ ಮಾತನಾಡಿ, ಅನಧಿಕೃತ ಕಟ್ಟಡಗಳಿಗೆ ನೋಟೀಸ್ ನೀಡಿದ ನಂತರ ನಿಯಮಾನುಸಾರ ಡೆಮಾಲಿಷನ್ ಆದೇಶಗಳನ್ನು ಹೊರಡಿಸಬೇಕು. ಅನಧಿಕೃತ ಕಟ್ಟಡಗಳ ಪರಿಶೀಲನೆ ನಡೆಸಿ, ಹೆಚ್ಚುವರಿ ಮಹಡಿಗಳನ್ನು ನಿರ್ಮಿಸಿದ್ದಲ್ಲಿ ಅವುಗಳನ್ನು ಕೂಡಲೇ ತೆರವುಗೊಳಿಸುವಂತೆ ಕ್ರಮ ಕೈಗೊಳ್ಳಬೇಕು. ಈ ಸಂಬಂಧ ಅಧಿಕಾರಿಗಳು ಹಾಗೂ ಮಾರ್ಷಲ್‌ಗಳನ್ನು ಒಳಗೊಂಡ ತಂಡಗಳನ್ನು ರಚಿಸಿ ತೆರವು ಕಾರ್ಯಾಚರಣೆ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

ಕಟ್ಟಡ ನಕ್ಷೆ ಮಂಜೂರಾತಿ ಪಡೆಯದೆ ನಿರ್ಮಾಣವಾಗುತ್ತಿರುವ ಕಟ್ಟಡಗಳಿಗೆ ಸೀಲ್ ಮಾಡಿ, ಕಾಮಗಾರಿ ನಡೆಯದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು. ಕಟ್ಟಡ ನಿರ್ಮಾಣದ ಪ್ರಾರಂಭದಲ್ಲೇ ನಿಯಮ ಉಲ್ಲಂಘನೆ ನಡೆಯುತ್ತಿದೆಯೇ ಎಂಬುದನ್ನು ಪರಿಶೀಲಿಸಿ, ಆರಂಭದಲ್ಲೇ ಶಿಸ್ತು ಕ್ರಮಗಳನ್ನು ಕೈಗೊಳ್ಳುವ ಮೂಲಕ ಅನಧಿಕೃತ ಕಟ್ಟಡ ನಿರ್ಮಾಣವನ್ನು ತಡೆಯಬೇಕು. ಜತೆಗೆ ರಸ್ತೆ ಬದಿಯಲ್ಲಿ ಕಟ್ಟಡ ನಿರ್ಮಾಣದಿಂದ ಉಂಟಾಗುವ ಭಗ್ನಾವಶೇಷಗಳನ್ನು ಕೂಡಲೇ ತೆರವುಗೊಳಿಸಬೇಕು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಆಸ್ತಿ ತೆರಿಗೆ ಸಂಗ್ರಹಕ್ಕೆ ಆದ್ಯತೆ ನೀಡಿ

ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯಲ್ಲಿ 10 ವಿಧಾನಸಭಾ ಕ್ಷೇತ್ರಗಳು ಹಾಗೂ 21 ಉಪವಿಭಾಗಗಳಿದ್ದು, ಸುಮಾರು 6 ಲಕ್ಷ ಆಸ್ತಿಗಳು ಒಳಗೊಂಡಿವೆ. ಈ ಪೈಕಿ 1,281 ಕೋಟಿ ರು. ಆಸ್ತಿ ತೆರಿಗೆ ಸಂಗ್ರಹ ಗುರಿ ಹೊಂದಲಾಗಿದ್ದು, ಇದುವರೆಗೆ 733 ಕೋಟಿ ರು. ತೆರಿಗೆ ಸಂಗ್ರಹಿಸಲಾಗಿದೆ. ಉಳಿದ ಬಾಕಿ ಆಸ್ತಿ ತೆರಿಗೆಯನ್ನು ನಿಗದಿತ ಕಾಲಮಿತಿಯೊಳಗೆ ಸಂಗ್ರಹಿಸಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಮಹೇಶ್ವರ್ ರಾವ್ ಸೂಚಿಸಿದರು.

ಪಶ್ಚಿಮ ನಗರ ಪಾಲಿಕೆ ಆಯುಕ್ತ ಡಾ. ರಾಜೇಂದ್ರ ಕೆ.ವಿ ಮಾತನಾಡಿ, ಆಸ್ತಿ ಪರಿಷ್ಕರಣೆ ಹಾಗೂ ಸುಸ್ತಿದಾರರಿಂದ ಬಾಕಿ ಆಸ್ತಿ ತೆರಿಗೆಯನ್ನು ತ್ವರಿತಗತಿಯಲ್ಲಿ ಸಂಗ್ರಹಿಸಲು ಎಲ್ಲ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಮನೆಗಳ ಮುಂದೆ ಬಾಕಿ ಆಸ್ತಿ ತೆರಿಗೆ ಪಾವತಿಗೆ ನೋಟೀಸ್ಗಳನ್ನು ಅಂಟಿಸುವ ಕಾರ್ಯ ನಡೆಯುತ್ತಿದ್ದು, ಕರ್ತವ್ಯ ನಿರ್ಲಕ್ಷ್ಯ ಮಾಡಿದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಪಶ್ಚಿಮ ನಗರ ಪಾಲಿಕೆ ಅಭಿವೃದ್ಧಿ ವಿಭಾಗದ ಅಪರ ಆಯುಕ್ತ ದಿಗ್ವಿಜಯ್ ಬೋಡ್ಕೆ, ಕಂದಾಯ ವಿಭಾಗದ ಅಪರ ಆಯುಕ್ತ ಮಂಜುನಾಥ ಸ್ವಾಮಿ, ಜಂಟಿ ಆಯುಕ್ತರಾದ ಸಂಗಪ್ಪ,ಆರತಿ ಆನಂದ್ ಇದ್ದರು.

ಮೆಟ್ರೋ ಕಿತ್ತಳೆ ಮಾರ್ಗಕ್ಕೆ ಸಿವಿಲ್ ಟೆಂಡರ್ ಆಹ್ವಾನ

3 ಪ್ಯಾಕೇಜ್‌ಗಳಿಗೂ ಪ್ರತ್ಯೇಕ ಬಜೆಟ್

ಬೆಂಗಳೂರು: ನಗರದ ಬಹುನಿರೀಕ್ಷಿತ ಕಿತ್ತಳೆ ಮೆಟ್ರೋ ಮಾರ್ಗಕ್ಕಾಗಿ ನಮ್ಮ ಮೆಟ್ರೋ ಮೂರು ಪ್ಯಾಕೇಜ್‌ಗಳಲ್ಲಿ ಸಿವಿಲ್ ಟೆಂಡರ್ ಆಹ್ವಾನಿಸಿದ್ದು, ಪ್ರತ್ಯೇಕ ಬಜೆಟ್ ನೀಡಲಾಗಿದೆ.

ಜೆ.ಪಿ.ನಗರದ 4ನೇ ಹಂತದಿಂದ ನಾಗರಬಾವಿವರೆಗಿನ ಕಾಮಗಾರಿಯನ್ನು ಒಳಗೊಂಡಿದ್ದು, ಫೆಬ್ರವರಿ 20ರಿಂದ 25ರೊಳಗಾಗಿ ಟೆಂಡರ್ ಸಲ್ಲಿಸಲು ಅವಕಾಶ ನೀಡಲಾಗಿದೆ. ಮೂರು ಪ್ಯಾಕೇಜ್‌ಗಳಿಗೂ ಪ್ರತ್ಯೇಕ ಬಜೆಟ್ ನೀಡಲಾಗಿದೆ. 2024ರ ಆಗಸ್ಟ್ 16ರಂದು ನಮ್ಮ ಮೆಟ್ರೋ ಕಿತ್ತಳೆ ಮಾರ್ಗದ ಯೋಜನೆಗೆ ಕೇಂದ್ರ ಸರಕಾರ ಅನುಮೋದನೆ ನೀಡಿತ್ತು.

ಪ್ಯಾಕೇಜ್ 1 ಜೆ.ಪಿ ನಗರ 4ನೇ ಹಂತದಿಂದ ಕಾಮಾಕ್ಯವರೆಗೆ ಡಬಲ್ ಡೆಕ್ಕರ್ ಹಾಗೂ ಡಾಲರ್ಸ್ ಕಾಲೋನಿ ಮೇಲ್ಸೇತುವೆ ತೆರವು ಒಳಗೊಂಡು ಒಟ್ಟು ಜೆ.ಪಿ. ನಗರ 5ನೇ ಹಂತ, ಜೆ.ಪಿ. ನಗರ, ಕಾದಿರೇನಹಳ್ಳಿ, ಕಾಮಾಕ್ಯ ಜಂಕ್ಷನ್ ನಿಲ್ದಾಣಗಳನ್ನು ಒಳಗೊಂಡಿದೆ. ಈ ಪ್ಯಾಕೇಜ್‌ನ ಮೊತ್ತ 1,375 ಕೋಟಿ ರು.ಗಳು. ಹೊಸಕೆರೆಹಳ್ಳಿಯಿಂದ ನಾಗರಬಾವಿ ಸರ್ಕಲ್‌ವರೆಗೆ ಡಬಲ್ ಡೆಕ್ಕರ್‌ನ ಪ್ಯಾಕೇಜ್ 2 ಒಳಗೊಂಡಿದೆ. 1,396 ಕೋಟಿ ಮೊತ್ತದ ಈ ಪ್ಯಾಕೇಜ್ ಹೊಸಕೆರೆಹಳ್ಳಿ, ದ್ವಾರಕಾನಗರ, ಮೈಸೂರು ರಸ್ತೆ ಮತ್ತು ನಾಗರಭಾವಿ ಸರ್ಕಲ್ ನಿಲ್ದಾಣಗಳು ಸೇರಿವೆ.

ಪ್ಯಾಕೇಜ್ 3ರ ಕಾರಿಡಾರ್ 1 ವಿನಾಯಕ ಲೇಔಟ್‌ನಿಂದ ನಾಗರಬಾವಿ ಬಿಡಿಎ ಕಾಂಪ್ಲೆಕ್ಸ್‌ವರೆಗೆ ಒಟ್ಟು 3 ನಿಲ್ದಾಣಗಳನ್ನು ಒಳಗೊಂಡಿದೆ. ವಿನಾಯಕ ಲೇಔಟ್, ಪಾಪಿರೆಡ್ಡಿಪಾಳ್ಯ, ಬಿಡಿಎ ಕಾಂಪ್ಲೆಕ್ಸ್ ನಾಗರಭಾವಿ ನಿಲ್ದಾಣ ಇದರಲ್ಲಿ ಸೇರಿವೆ. ಹಾಗೆಯೇ ಪ್ಯಾಕೇಜ್ 3ರ ಕಾರಿಡಾರ್ 2 ಸುಂಕದಕಟ್ಟೆ ನಿಲ್ದಾಣ , ಸುಂಕದಕಟ್ಟೆ ಡಿಪೋ ಪ್ರವೇಶ ಮಾರ್ಗ ಮತ್ತು ನಿರ್ಗಮನ ಮಾರ್ಗವನ್ನು ಒಳಗೊಂಡಿದ್ದು, ಇದರ ಒಟ್ಟು ಮೊತ್ತ 1415 ಕೋಟಿ ರು.ಗಳಾಗಿವೆ.

ಪಾಸ್ ಮೂಲಕ ಅನಿಯಮಿತ ಸಂಚಾರಕ್ಕೆ ಅವಕಾಶ | ನಾಳೆಯಿಂದ ಪ್ರಯಾಣಿಕರಿಗೆ ಖರೀದಿ ಶುರು

ಮೆಟ್ರೋದಿಂದ ದೈನಂದಿನ ಪಾಸ್ ಪರಿಚಯ

ಬೆಂಗಳೂರು: ಮಕರ ಸಂಕ್ರಾಂತಿ ವೇಳೆಗೆ ಸಾರ್ವಜನಿಕರ ಬಹುಬೇಡಿಕೆಯ ಅನಿಯಮಿತ ಪಾಸ್ ಅನ್ನು ಪರಿಚಯಿಸಲು ಬಿಎಂಆರ್‌ಸಿಎಲ್ ಮುಂದಾಗಿದೆ. ಕ್ಯೂಆರ್ ಕೋಡ್ ಆಧಾರಿತ ಮೆಟ್ರೋ ಅನಿಯಮಿತ ಸಂಚಾರಿ ಪಾಸ್ ವಿತರಣೆ ವ್ಯವಸ್ಥೆ ಪರಿಚಯಿಸಲಿದ್ದು, ಜ.15ರಿಂದ ಪ್ರಯಾಣಿಕರು ಈ ಪಾಸ್ ಪಡೆಯಬಹುದಾಗಿದೆ.

ನಮ್ಮ ಮೆಟ್ರೋ ಮೊಬೈಲ್ ಕ್ಯೂಆರ್ ಕೋಡ್ ಆಧಾರಿತ 1 ದಿನ, 3 ದಿನ ಮತ್ತು 5 ದಿನಗಳ ಅನಿಯಮಿತ ಪ್ರಯಾಣ ಪಾಸ್‌ಗಳನ್ನು ಪರಿಚಯಿಸಿದ್ದು, ಜನವರಿ 15ರಿಂದ ಪ್ರಯಾಣಿಕರಿಗೆ ಖರೀದಿಸಬಹುದಾಗಿದೆ. ಪ್ರಯಾಣಿಕರ ಸೌಕರ್ಯವನ್ನು ಹೆಚ್ಚಿಸುವ ಹಾಗೂ ಡಿಜಿಟಲ್ ಟಿಕೆಟ್ ವ್ಯವಸ್ಥೆಯನ್ನು ಉತ್ತೇಜಿಸುವ ಉದ್ದೇಶದಿಂದ ಪಾಸ್ ವಿತರಿಸಲಾಗುತ್ತಿದೆ.

ಅನಿಯಮಿತ ಪ್ರಯಾಣ ಪಾಸ್‌ಗಳು, ಕೇವಲ ಕಾಂಟ್ಯಾಕ್ಟ್ ಲೆಸ್ ಸ್ಮಾರ್ಟ್ ಕಾರ್ಡ್‌ಗಳ ಮೂಲಕವೇ ಲಭ್ಯವಾಗುತ್ತಿದ್ದವು. ಅದಕ್ಕೆ 50 ರುಪಾಯಿ ಭದ್ರತಾ ಠೇವಣಿ ಪಾವತಿಸುವುದು ಕಡ್ಡಾಯವಾಗಿತ್ತು. ಇದೀಗ ಮೊಬೈಲ್ ಕ್ಯೂಆರ್ ಪಾಸ್‌ಗಳ ಪರಿಚಯದೊಂದಿಗೆ, ಕ್ಯೂಆರ್ ಆಧಾರಿತ ಪಾಸ್‌ಗಳು ಮೊಬೈಲ್ ಫೋನ್ ಗಳಲ್ಲಿ ಡಿಜಿಟಲ್ ರೂಪದಲ್ಲಿ ಲಭ್ಯವಾಗುವುದರಿಂದ ಪ್ರಯಾಣಿಕರಿಗೆ ಯಾವುದೇ ಭದ್ರತಾ ಠೇವಣಿ ಪಾವತಿಸುವ ಅಗತ್ಯವಿರುವುದಿಲ್ಲ.

ಕ್ಯೂಆರ್ ಪಾಸ್‌ಗಳ ವೈಶಿಷ್ಟ್ಯಗಳು, ಪಡೆಯುವ ವಿಧಾನ

